MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 57 | ಬುಧವಾರ : 17-12-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 57 | WEDNESDAY : 17-12-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

### ನಗರ ಪೋಲಿಯೋ ಲಸಿಕೆ ಟಾಸ್ಕ್‌ಫೋರ್ಸ್ ಸಮಿತಿ ಸಭೆ

## 35,560 ಮಕ್ಕಳಿಗೆ ಲಸಿಕೆ ಹಾಕುವ ಗುರಿ: ಆಯುಕ್ತ ಜುಬಿನ್ ಮೊಹೊಪಾತ್ರ

ಯುವಮಾರ್ಗ ಸುದ್ದಿ

**ರಾಯಚೂರು,ಡಿ.16–** ರಾಯಚೂರು ನಗರದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನದಡಿ ಡಿ.21ರಿಂದ 24ರವರೆಗೆ ಐದು ವರ್ಷದೊಳಗಿನ 35,560 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಈ ಕಾರ್ಯಕ್ಕೆ ನಿಯೋಜನೆಗೊಂಡ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿ, ಅಂಗನವಾಡಿ ಆಶಾ ಕಾರ್ಯಕರ್ತೆಯರು ಕೆಲಸಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹೊಪಾತ್ರ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಡಿಸೆಂಬರ್



16ರ ಮಂಗಳವಾರ ದಂದು ನಗರದ ಹಳೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜರುಗಿದ ಪಲ್ಸ್ ಪೋಲಿಯೋ ನಗರ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ಆಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ನೋಡಿಕೊಳ್ಳಲು ನಗರ ಪ್ರದೇಶಗಳಲ್ಲಿ ಒಟ್ಟು 143 ಲಸಿಕಾ ಕೇಂದ್ರ ಸ್ಥಾಪಿಸಲಾಗಿದೆ. 9 ಟ್ರಾಂಜಿಟ್ ಹಾಗೂ 06 ಸಂಚಾರಿ (ಮೊಬೈಲ್) ತಂಡ ರಚಿಸಲಾಗಿದೆ. ಪಲ್ಸ್ ಪೋಲಿಯೋ ಅಭಿಯಾನದಲ್ಲಿ ಒಟ್ಟು 286 ವ್ಯಾಕ್ಸಿನೆಟರ್ಸ್, 31 ಮೇಲ್ವಿಚಾರಕರಿದ್ದು, ರಾಯಚೂರು ನಗರದಲ್ಲಿ ಒಟ್ಟು 62,685 ಮನೆಗಳನ್ನು ಲಸಿಕಾ ಅಭಿಯಾನದಡಿ ಸಂದರ್ಶಿಸುವ ಗುರಿ ಹೊಂದಲಾಗಿದೆ ಎಂದು ಆಯುಕ್ತರು ತಿಳಿಸಿದರು.

ಮಕ್ಕಳಿಗೆ ಎರಡು ಹನಿ ಪೋಲಿಯೋ ಹಾಕಿಸುವ ಮೂಲಕ ಕಳೆದ 14 ವರ್ಷಗಳಿಂದ ನಮ್ಮ ದೇಶದಲ್ಲಿ ಯಾವುದೇ ಪ್ರಕರಣ ವರದಿಯಾಗಿಲ್ಲ. ಎಂಬ ಹೆಗ್ಗಳಿಕೆಯನ್ನು ನಾವು ಮುಂದುವರೆಸೋಣ ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ (2ನೇ ಪುಟಕ್ಕೆ)

## ಈಗಲೂ ನಾನೇ ಸಿಎಂ, ಮುಂದೆಯೂ ನಾನೇ ಸಿಎಂ : ಸಿದ್ದರಾಮಯ್ಯ



**ಬೆಳಗಾವಿ, ಡಿ.16–** ರಾಜ್ಯದ ಜನ ಐದು ವರ್ಷ ಅಧಿಕಾರ ನಡೆಸಲು ನಮಗೆ ಆಶೀರ್ವಾದ ಮಾಡಿ ದ್ದಾರೆ. ಈಗಲೂ ಮುಖ್ಯಮಂತ್ರಿ, ಮುಂದೆಯೂ ನಾನೇ ಮುಖ್ಯಮಂತ್ರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆ ಯಲ್ಲಿಂದು ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಆಡಳಿತ ಪಕ್ಷದ ಶಾಸಕರಾ ಡಾ. ಹೆಚ್.ಡಿ.ರಂಗನಾಥ್ ಅವರ ಪ್ರಶ್ನೆಗೆ ಉತ್ತರಿಸುತ್ತಾ, ಮುಖ್ಯಮಂತ್ರಿಗಳು ತಾರತಮ್ಯವಾಗಿದ್ದರೆ ಮುಂದಿನ ವರ್ಷದಿಂದ ಸರಿಪಡಿಸವುದಾಗಿ ಭರವಸೆಯನ್ನು ನೀಡಿದರು.ಆಗ ವಿರೋಧ ಪಕ್ಷದ ನಾಯಕ ಅಶೋಕ್, ರಂಗನಾಥ್ ಅವರು ಆಕ್ರೋಶಭರಿತರಾಗಿ ಮಾತನಾಡುತ್ತಿದ್ದಾರೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉರಿಯುವುದಕ್ಕೆ ಉಪ್ಪು ಹಾಕಬೇಡಿ ಎಂದರು, ಕೂಡಲೇ ಅಶೋಕ್ ಹಾಗಾದರೆ ಉರಿಯುತ್ತಿರುವುದು ನಿಜ ಎಂಬಂತೆ ಒಪ್ಪಿಕೊಂಡಂತಾಯಿತಲ್ಲ ಎಂದು ಸಿಎಂ ಅವರನ್ನು ಛೇಡಿಸಿದರು. (2ನೇ ಪುಟಕ್ಕೆ)

## ಮಕ್ಕಳ ಶಿಕ್ಷಣಕ್ಕೆ ಸ್ಫೂರ್ತಿ: ಧನಂಜಯ

ಯುವಮಾರ್ಗ ಸುದ್ದಿ

**ದೇವದುರ್ಗ,ಡಿ.16–** ಮಕ್ಕಳ ಅಭಿಪ್ರಾಯಕ್ಕೆ ಅವಕಾಶ ಮತ್ತು ಮನ್ನಣೆ ನೀಡಿ ಅವರು ಕೇಳುವ ಪ್ರತಿಯೊಂದು ಸಮಸ್ಯೆಗಳಿಗೆ ಸ್ಪಂದಿಸಿ ಮಕ್ಕಳ ಕಲಿಕೆಗೆ ಉತ್ತೇಜನ ಹಾಗೂ ಕಲಿಕೆಗೆ ಪೂರಕ ವಾತಾವರಣವನ್ನ ಕಲ್ಪಿಸುವ ಪ್ರಮುಖ ಅಂಶವೇ ಈ ಗ್ರಾಮ ಸಭೆಯ ಉದ್ದೇಶವಾಗಿದೆ ಎಂದು ಮುಷ್ಟೂರು ಗ್ರಾಮ ಪಂಚಾಯತ ಅಧ್ಯಕ್ಷ ಧನಂಜಯ ಶಿವಂಗಿ ಹೇಳಿದರು.

ಅವರು ಗ್ರಾಮ ಪಂಚಾಯತ ಕಾರ್ಯಾಲಯ ಮುಷ್ಟೂರು ಹಾಗೂ ಡಾನ್ ಬೋಸ್ಕೊ ಸಮಾಜ ಸೇವಾ ಸಂಸ್ಥೆ ಹಾಗೂ ಸರ್ಕಾರಿ ಪ್ರೌಢ ಶಾಲೆ ಶಿವಂಗಿಯಲ್ಲಿ ಆಯೋಜಿಸಲಾಗಿದ್ದ ಹಕ್ಕುಗಳ ಗ್ರಾಮ ಸಭೆ ಉದ್ಘಾಟಿಸಿ ಮಾತನಾಡಿ ಮಕ್ಕಳ ಕಲಿಕೆ ಮತ್ತು ಸಮಸ್ಯೆಗಳನ್ನು ಗುರುತಿಸಿ ಅವರು ಹೇಳುವ ಪ್ರತಿಯೊಂದು ಸಮಸ್ಯೆಗಳನ್ನು ಹಂತ ಹಂತವಾಗಿ ಪರಿಹಾರವನ್ನ





ಒದಗಿಸಿಕೊಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ತದನಂತರ ಸಂಪನ್ಮೂಲ ವ್ಯಕ್ತಿ ಸಿದ್ದಲಿಂಗಪ್ಪ ಕಾಕರಗಲ್ ಮಾತನಾಡಿ ಪ್ರಸ್ತುತ ಶೈಕ್ಷಣಿಕ ಅವಧಿಯಲ್ಲಿ ಮಕ್ಕಳ ಗುಣಾತ್ಮಕ ಶಿಕ್ಷಣದ ಕಡೆ ಗಮನಹರಿಸಿ ಯಾವುದೇ ಮಗು ಶಾಲೆಯಿಂದ ಹೊರಗೊಳಿಯದನೆ ಮತ್ತು ಬಾಲ್ಯ ವಿವಾಹ ಪದ್ಧತಿಯಿಂದ ಮಕ್ಕಳನ್ನು ರಕ್ಷಿಸುವ ಅವರ ಹಕ್ಕುಗಳನ್ನು ಅನುಭವಿಸಲು ಉತ್ತಮವಾದ ವೇದಿಕೆಗಳನ್ನು ಕಲ್ಪಿಸುವುದರ ಮೂಲಕ ಅವರ ಅಭಿಪ್ರಾಯಕ್ಕೆ ಮನ್ನಣೆ ನೀಡಿ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ನಾವೆಲ್ಲರೂ ಅವಕಾಶ ನೀಡುತ್ತಾ, ಯಾವುದೇ ಮಗು ಶಿಕ್ಷಣದಿಂದ ವಂಚಿತನಾಗದೆ ಅವರ ಹಕ್ಕನ್ನು ಪಡೆಯುವಂತೆ ಪ್ರೇರಣೆ ನೀಡುವ ಜವಾಬ್ದಾರಿ ಸ್ಥಳೀಯ ಸರ್ಕಾರದ ಮೇಲಿದೆ ಎಂದರು.ಅಂಗನವಾಡಿಗೆ ಸಂಬಂಧಿಸಿದಂತೆ ಶೌಚಾಲಯಗಳ ನಿರ್ಮಾಣ ಆಟಿಕೆ ಸಾಮಾನುಗಳು ಮತ್ತು ಮಕ್ಕಳಿಗೆ ಸಮವಸ್ತ್ರಹೊಸ (2ನೇ ಪುಟಕ್ಕೆ)

## ಕೆ.ಪಿ.ಎಸ್.ವಿ.ಎಸ್. ಅಯುರ್ವೇದಿಕ್ ಮೇಡಿಕಲ್ ಕಾಲೇಜ್‌ನಲ್ಲಿ ದೃತಿಶೌರ್ಯಂ 2ಕೆ. 25-26 ಕ್ರೀಡಾಕೂಟ

ಯುವಮಾರ್ಗ ಸುದ್ದಿ

**ಮಾನ್ವಿ,ಡಿ.16–** ಪಟ್ಟಣದ ಕೆ.ಪಿ.ಎಸ್.ವಿ.ಎಸ್. ಅಯುರ್ವೇದಿಕ್ ಮೇಡಿಕಲ್ ಕಾಲೇಜ್ ಮತ್ತು ಆಸ್ಪತ್ರೆಯ ಕ್ರೀಡಾಂಗಣದಲ್ಲಿ ನಡೆದ ದೃತಿಶೌರ್ಯಂ 2ಕೆ. 25-26 ಕ್ರೀಡಾಕೂಟ ಕ್ಕೆ ಕ್ರೀಡಾಜ್ಯೋತಿಯನ್ನು ಬೆಳಗಿಸುವ ಮೂಲಕ ಉದ್ಘಾಟಿಸಿ ಕೆ.ಪಿ.ಎಸ್.ವಿ.ಎಸ್. ಕಾಲೇಜಿನ ಅಧ್ಯಕ್ಷರಾದ ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಾಚನ ನೀಡಿ ವಿದ್ಯಾರ್ಥಿಗಳು ದೈಹಿಕ ಮತ್ತು ಮಾನಸಿಕವಾಗಿ ಸದೃಡವಾಗಿರುವುದಕ್ಕೆ ಕ್ರೀಡೆಗಳಲ್ಲಿ ಭಾಗವಹಿಸುವುದು ಮುಖ್ಯವಾಗಿರುತ್ತದೆ ಅದ್ದರಿಂದ ಕಾಲೇಜಿನ ವಿದ್ಯಾರ್ಥಿಗಳು ಕ್ರೀಡೆಗಳಲ್ಲಿ ಭಾಗವಹಿಸುವುದು ಅಗತ್ಯ ಎಂದು ತಿಳಿಸಿದರು





ಮಾನ್ವಿ ಪೊಲೀಸ್ ಠಾಣೆಯ ಪಿ.ಎಸ್.ಐ. ಅಜ್ಮೀರ್ ಕುರೇಷಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಡಾ.ಜೀವನೇಶ್ವರಯ್ಯ, ಉಪಾಪ್ರಾಚಾರ್ಯರಾದ ಡಾ.ಸುಮಂಗಲ ಹೆಚ್.ಎಂ., ಕಾಲೇಜಿನ ಆಡಳಿತಾಧಿಕಾರಿಗಳಾದ ವಿಶ್ವರಾಧ್ಯಸ್ವಾಮಿ, ಉಮಶಂಕರ್ ಹೆಚ್. ಸೇರಿದಂತೆ ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.

## ಪುರೋಹಿತರ ಸಂಘದಿಂದ ನೋಟ್ ಬುಕ್ ವಿತರಣೆ

ಯುವಮಾರ್ಗ ಸುದ್ದಿ

**ಮಸ್ಕಿ,ಡಿ.16–** ಮಸ್ಕಿ ತಾಲೂಕಿನ ಅಖಿಲ ಭಾರತ ಅಸಂಘಟಿತ ಪುರೋಹಿತ ಕಾರ್ಮಿಕರ ಎಡರೇಷನ್ ಮಸ್ಕಿ ಘಟಕದ ವತಿಯಿಂದ ಅಭಿನಂದನ್ ಸ್ಫೂರ್ತಿ ಧಾಮದ ಮಕ್ಕಳಿಗೆ ನೂರಾರು ನೋಟು ಬುಕ್ಕುಗಳನ್ನು ವಿಚಾರಿಸಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ರಾಘವೇಂದ್ರಚಾರ್ಯ ಅವರು ನಮ್ಮ ಭಾಗದಲ್ಲಿ ಅಭಿನಂದನ್ ಸ್ಫೂರ್ತಿ ಧಾಮವು ಹಲವಾರು ಮಕ್ಕಳಿಗೆ ಆಸರೆಯಾಗಿದೆ ಹಾಗೂ ಶಿಕ್ಷಣದಿಂದ ವಂಚಿತ ಮಕ್ಕಳ ಶಿಕ್ಷಣಕ್ಕೆ ಇವರು ನೀಡುತ್ತಿರುವ ಸೇವೆಯು ಮಸ್ಕಿಗೆ ಒಂದು ಮಾದರಿಯಾದ ಸೇವೆಯಾಗಿದೆ ಎಂದು ಹೇಳಿದರು.

ಅಶೋಕ ಠಾಕೂರ್ ಮಾತನಾಡಿ ಅಭಿನಂದನ ಸಂಸ್ಥೆಯ ಎಲ್ಲಾ ಸೇವ ಕಾರ್ಯಗಳು ಜನಪರ ಸಮಾಜಪರ ಆಗಿದೆ ಎಂದರು ಅದಕ್ಕಾಗಿ ಈ ಆಶೀರ್ವಾದ ಮಕ್ಕಳಿಗೆ ನಮ್ಮ ಸಂಘದಿಂದ ನೋಟು ಬುಕ್ ಗಳನ್ನು ವಿಸ್ತರಿಸುತ್ತೇವೆ ಹಾಗೂ ಎಲ್ಲರೂ





ತನು ಮನ ಧನದಿಂದ ಸಹಕರಿಸಬೇಕು ಎಂದರು.

ಈ ಸಂದರ್ಭದಲ್ಲಿ ಉದ್ಯಮಿಗಳಾದ ಪಿಲ್ಲಿ ರಾಮರಾವ್, ಪುರೋಹಿತ ಸಂಘದ ಅಧ್ಯಕ್ಷರಾದ ಹನುಮೇಶಾಚಾರ್ಯ, ಸಂಘಟನಾ ಕಾರ್ಯದರ್ಶಿ ವಿರನಾರಾಯಣ ಪೂಜಾರಿ ಅಭಿನಂದನ್ ಸಂಸ್ಥೆಯ ಸಂಸ್ಥಾಪಕ ರಾಮಣ್ಣ ಹಂಪರಗುಂದಿ ಹಾಗೂ ಮಕ್ಕಳು ಉಪಸ್ಥಿತರಿದ್ದರು.

## ಶಿಕ್ಷಣ ಇಲಾಖೆ ಯಡವಟ್ಟು,ಶಾಲೆ ಕಟ್ಟಡ ನೆಲಸಮ,ಅಂಗನವಾಡಿ ಕಟ್ಟಡ ಆರಂಭ,ಎಸ್ಡಿಎಮ್ಸಿ ಆರೋಪ

ಯುವಮಾರ್ಗ ಸುದ್ದಿ

**ಮಸ್ಕಿ,ಡಿ 16 –** ತಾಲ್ಲೂಕಿನ ಹಾಲಾಪೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಜಂಗಮರಹಳ್ಳಿ ಶಾಲೆಯ ಹಳೆ ಕಟ್ಟಡ ನೆಲಸಮ ಮಾಡಿ ಅದೇ ಜಾಗದಲ್ಲಿ ಹೊಸದಾಗಿ ಅಂಗನವಾಡಿ ಕಟ್ಟಡ ಆರಂಭ ಮಾಡಿದ್ದು ಅದಕ್ಕೆ ಶಾಲಾ ಎಸ್ ಡಿ ಎಮ್ ಸಿ ಅಧ್ಯಕ್ಷ ತಿರುಪತಿ ಯವರು ಆರೋಪ ಮಾಡಿದ್ದಾರೆ,ಹಳೆ ಕಟ್ಟಡ ನೆಲಸಮ ಮಾಡಬೇಕಾದರೆ ಲೋಕೋಪಯೋಗಿ ಇಲಾಖೆಯ ಅನುಮತಿ,ಹಾಗೆ ಶಾಲೆಯ ಎಸ್ ಡಿ ಎಮ್ ಸಿ ಪದಾಧಿಕಾರಿಗಳು ಮತ್ತು ಮುಖ್ಯಗುರುಗಳ ಅನುಮತಿ ಬೇಕು. ಇಷ್ಟೆಲ್ಲ ನಿಯಮಗಳನ್ನು ಗಾಳಿಗೆ ತೂರಿ ಏಕಾಏಕಿ ಬರಿ ಪಿಡಿಒ, ಸದಸ್ಯರು, ಸಿ ಆರ್ ಪಿ ಅವರಿಗೆ ಮೌಖಿವಾಗಿ ಹೇಳಿದಿವಿ,ಮಾತಾಡಿದಿವಿ ಎಂಬ ಉಂಬತನದಿಂದ ಹಳೆ ಶಾಲಾ ಕಟ್ಟಡ ನೆಲಸಮ ಮಾಡಿ ಇವಾಗ ಅಂಗನವಾಡಿ ಕಟ್ಟಡ ಆರಂಭ ಮಾಡಿದ್ದು ಯಾವ




ನಿಯಮ,ಲಿಖಿತವಾಗಿ ಒಂದು ಪರವಾನಗಿ ಪತ್ರ ಯಾರು ಹತ್ತಿರ ಇಲ್ಲ ಇದು ಶಿಕ್ಷಣ ಇಲಾಖೆಯ ಯಡವಟ್ಟು,ಈ ಬಗ್ಗೆ ಕ್ಷೇತ್ರ ಶಿಕ್ಷಾಧಿಕಾರಿಗಳು ಮಾನ್ವಿ , ಸ್ಥಳೀಯ ಸಿ ಆರ್ ಪಿ ಪ್ರಶಾಂತಗೌಡ ಅವರಿಗೆ ತಮ್ಮ ವ್ಯಾಪ್ತಿಯಲ್ಲಿ ಬರುವ ಶಾಲೆಗಳ ಬಗ್ಗೆ ಮಾಹಿತಿ ಇಲ್ಲ ಇಂತಹ ನಿರ್ಲಕ್ಷ್ಯ ಅಧಿಕಾರಿಗಳು ಏಕೆಬೇಕು, ಹಾಗೆ ಜೆಇ ವೆಂಕಟೇಶ ಸಹ ಶಾಲೆಗೆ ಮಾಹಿತಿ ತಿಳಿಸದೆ ತಮ್ಮ ಆಸ್ತಿಯಂತೆ ಶಾಲಾ ಕಟ್ಟಡ ನೆಲಸಮ ಮಾಡಿ ಅಂಗನವಾಡಿ ಕಟ್ಟಡ ಆರಂಬಿಸಿದ್ದು,ಈ ಬಗ್ಗೆ ಮಾಹಿತಿ ಸಂಬಂಧ ಕರೆ ಮಾಡಿದರೆ ಸಂಪರ್ಕಕ್ಕೆ ಬರಲಿಲ್ಲ ಅದಕ್ಕೆ ಕೆಲಸವನ್ನು ನಿಲ್ಲಿಸಲಾಗಿದೆ ಎಂದು ಎಸ್ಡಿಎಮ್ಸಿ ಅಧ್ಯಕ್ಷ ತಿರುಪತಿ ಯವರು ಶಿಕ್ಷಣ ಇಲಾಖೆ ಅಧಿಕಾರಿಗಳು ಮತ್ತು ಜೆಇ ವೆಂಕಟೇಶ ಬೇಜವಾಬ್ದಾರಿ ಅಧಿಕಾರಿಗಳ ವಿರುದ್ಧ ತೀವ್ರವಾಗಿ ಆರೋಪ ಮಾಡಿದ್ದಾರೆ.

## ಸಿಂಗಾಪುರದಲ್ಲಿ ಕಲಬುರಗಿ ಕಲಾವಿದರ ಚಿತ್ರಕಲಾ ಪ್ರದರ್ಶನ

**ಕಲಬುರಗಿ,ಡಿ.16–**ಕಲಬುರಗಿ ಕಲಾವಿದರ ಅಂತರಾಷ್ಟ್ರೀಯ ಚಿತ್ರಕಲಾ ಪ್ರದರ್ಶನವನ್ನು ಡಿ.17 ರಂದು ಸಿಂಗಾಪುರದ ರೇಬೋ ಆರ್ಟ್ ಗ್ರೂಪ್ ಅಕ್ರಾಸ್ ಬಾರ್ಡನಿಂದ ಆಯೋಜಿಸಲಾಗಿದೆ.

ಈ ಪ್ರದರ್ಶನವನ್ನು ಡಿ.17 ಮತ್ತು 19 ರಂದು ಲಿವಿಂಗ್ ವಿಥ್ ಆರ್ಟ್ ಸಿಂಗಾಪುರದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಗುಂಪು ಪ್ರದರ್ಶನದಲ್ಲಿ ಕಲಬುರಗಿ ಹಿರಿಯ ಚಿತ್ರಕಲಾವಿದರಾದ ಬಸವರಾಜ ಉಪ್ಪಿನ, ರಾಜಶೇಖರ ಶಾಮಣ್ಣ ಹಾಗೂ ಚಿತ್ರಕಲಾವಿದ ಚಿತ್ರನಟ ನಾಗರಾಜ್ ಕುಂಬಾರ್ ಅವರು ಭಾಗವಹಿಸಲಿದ್ದಾರೆ.



ಪ್ರಸ್ತುತ ದಿನಗಳಲ್ಲಿ ಕಲಬುರ್ಗಿಯ ಕಲಾವಿದರು ರಾಜ್ಯಮಟ್ಟದ ಹಾಗೂ ರಾಷ್ಟಮಟ್ಟದಲ್ಲಿ ಕಲಾಪ್ರದರ್ಶನಗಳು ಪ್ರದರ್ಶಿಸಿ ಸೈ ಅನಿಸಿಕೊಂಡಿದ್ದು, ಇದೀಗ ಅಂತರಾಷ್ಟ್ರೀಯ ಮಟ್ಟದಲ್ಲಿ ಕೂಡ ತಮ್ಮ ಕಲಾಕೃತಿಗಳನ್ನು ಪ್ರದರ್ಶಿಸಿ ಕಲಬುರ್ಗಿ ಭಾಗಕ್ಕೆ ಕೀರ್ತಿ ತಂದಿದ್ದಾರೆ. ಅದರಲ್ಲಿ ಚಿತ್ರಕಲಾವಿದರಾದ ಬಸವರಾಜ್ ಉಪ್ಪಿನ್ ಹಾಗೂ ರಾಜಶೇಖರ್ ಶಾಮಣ್ಣ ಹಾಗೂ ಚಿತ್ರಕಲಾವಿದ ಮತ್ತು ಚಿತ್ರನಟ ನಾಗರಾಜ್ ಕುಂಬಾರ್ ಅವರು ಇದೇ ಡಿಸೆಂಬರ್ 17ರಂದು ಸಿಂಗಾಪುರದಲ್ಲಿ ತಮ್ಮ ಕಲಾಕೃತಿಗಳನ್ನು ಪ್ರದರ್ಶಿಸಲಿದ್ದಾರೆ.

ಈ ಕಲಾಪ್ರದರ್ಶನದಲ್ಲಿ ಒಟ್ಟು 30 ಕ್ಕಿಂತ ಹೆಚ್ಚು ಕಲಾವಿದರು ಭಾಗವಹಿಸಿ ನೂರಕ್ಕಿಂತ ಹೆಚ್ಚು ಕಲಾಕೃತಿಗಳು ಪ್ರದಶಿ ಪ್ರದರ್ಶಿಸಲಿದ್ದಾರೆ ಎಂದು ಆಯೋಜಕರಾದ ವಿರೇಂದ್ರ ಸಿಂಗ್ ಕುಮಾರ್ ಇವರು ತಿಳಿಸಿದ್ದಾರೆ. (2ನೇ ಪುಟಕ್ಕೆ..)

## ವಿದ್ಯಾರ್ಥಿಗಳ ಸೃಜನಶೀಲತೆ ಮೆರೆದ ಪ್ರತಿಭಾ ಕಾರಂಜಿ ಕಾರ್ಯಕ್ರಮ : ಸೈಯದ್ ನಜೀರುದ್ದೀನ್ ಖಾದ್ರಿ ಗುರು

ಯುವಮಾರ್ಗ ಸುದ್ದಿ

**ಮಾನ್ವಿ,ಡಿ.16–**ಮಂಗಳವಾರದಂದು ಸರ್ಕಾರಿ ಕಿರಿಯ ಪ್ರಾಥಮಿಕ ಉರ್ದು ಅಂದ್ರುನಿಕೀಲ್ಲ ಮಾನ್ವಿ ಶಾಲೆಯಲ್ಲಿ ಉರ್ದು ವಲಯ ಮಟ್ಟದ ಪ್ರತಿಭಾ ಕಾರಂಜಿಯನ್ನು ಬಹಳ ಅದ್ದೂರಿಯಾಗಿ ಆಚರಿಸಲಾಯಿತು.

ಸದರಿ ಕಾರ್ಯಕ್ರಮದಲ್ಲಿ ಅಖಂಡ ಮಾನವಿ ತಾಲೂಕಿನ ಮಕ್ಕಳು ಶಿಕ್ಷಕರು ಹಾಗೂ ಎಸ್ಡಿಎಂಸಿ ಸದಸ್ಯರು ಹಾಜರಿದ್ದರು ಸದರಿ ಸಭೆಯಲ್ಲಿ ಕರ್ನಾಟಕ ಸರ್ಕಾರದ ನೌಕರರ ಮಾನ್ವಿ ತಾಲೂಕಿನ ಅಧ್ಯಕ್ಷರಾದಂತಹ ಶ್ರೀ ಸುರೇಶ್ ಕುರುಡಿ ಹಾಗೂ ಪ್ರಧಾನ ಕಾರ್ಯದರ್ಶಿಗಳ ಆದಂತಹ ಹಂಪಣ್ಣ ಚಂಡೂರ್ ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರ ಅಧ್ಯಕ್ಷರಾದಂತಹ ಸಂಗಮೇಶ್ ಮುಧೋಳ್, ಹಾಗೂ ಪುರಸಭೆ ಸದಸ್ಯರಾದಂತಹ ಜಿಲಾನಿ ಖುರೇಶಿ ರವರು ಹಾಗೂ ಉರ್ದು ಸಿಆರ್ಪಿ ಮೊಹಮ್ಮದ್ ರಫೀಕ್ ಹಾಗೂ ಸದರಿ ಶಾಲೆಯ ಮುಖ್ಯ ಗುರುಗಳಾದಂತ ಶ್ರೀ ಕೃಷ್ಣ ರವರು ಹಾಜರಿದ್ದರು

# ಮೊದಲನೇಯ ಪುಟದಿಂದ

### ನಗರ ಪೋಲಿಯೋ ಲಸಿಕೆ ಟಾಸ್ಕ್ಫೋರ್ಸ್ ಸಮಿತಿ ಸಭೆ

### 35,560 ಮಕ್ಕಳಿಗೆ ಲಸಿಕೆ ಹಾಕುವ ಗುರಿ: ಆಯುಕ್ತ ಜುಬಿನ್ ಮೊಹೊಪಾತ್ರ

ಮೊಹೊಪಾತ್ರಾ ಅವರು ಸೂಚಿಸಿದರು. ಭಾನುವಾರದಂದು ಕುಟುಂಬದ ಸದಸ್ಯರೆಲ್ಲರೂ ಮನೆಯಲ್ಲಿ ಇರುವುದರಿಂದ ಇಂದಿನಿಂದಲೇ ನಗರಪಾಲಿಕೆಯ ತ್ಯಾಜ್ಯ ವಿಲೇವಾರಿ ವಾಹನದ ಮೂಲಕ ಮೈಕಿಂಗ್, ಪ್ರಮುಖ ಸ್ಥಳಗಳಲ್ಲಿ ಹೊರ್ಡಿಂಗ್ಗಳಿಗೆ ಪ್ಲೇಕ್ಸ್ ಅಳವಡಿಕೆ ಹಾಗೂ ವಾಟ್ಸ್ ಆಪ್, ಫೇಸ್‌ಬುಕ್, ಎಕ್ಸ್ ಸೇರಿದಂತೆ ಮುಂತಾದ ಸಾಮಾಜಿಕ ಜಾಲತಾಣಗಳನ್ನು ಬಳಸಿಕೊಂಡು ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಹಾಗೂ ಮಾರುಕಟ್ಟೆ, ಕೈಗಾರಿಕಾ ಪ್ರದೇಶ ಸೇರಿದಂತೆ ಎಲ್ಲ 143 ಬೂತ್‌ಗಳಲ್ಲಿ ಮೊದಲ ದಿನವೇ ಶೇಕಡ 100 ರಷ್ಟು ಗುರಿ ಸಾಧಿಸಲು ಕಾರ್ಯಯೋಜನೆ ಹಾಕಿಕೊಳ್ಳಬೇಕೆಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್, ಪಾಲಿಕೆ ಆರೋಗ್ಯಾಧಿಕಾರಿ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದಿನ್, ತಾಲೂಕಾ ಆರೋಗ್ಯಾಧಿಕಾರಿ ಡಾ.ಪ್ರಜ್ವಲ್‌ಕುಮಾರ್, ಜಿಲ್ಲಾ ಅರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್.ದಾಸಪ್ಪನವರ, ಪರಿಸರ ಅಭಿಯಂತರರು ಜಯಪಾಲ್ ರೆಡ್ಡಿ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಬಿ.ಹೆಚ್.ಇ.ಓ, ಸರೋಜಾ ಕೆ, ಹಿರಿಯ ಆರೋಗ್ಯ ನೀರಿಕ್ಷಣಾಧಿಕಾರಿ ಸುರೇಶ್, ಕ್ಷೇತ್ರ ಲಸಿಕಾ ಮೇಲ್ವಿಚಾರಕ ಕೋಪ್ರೇಶ್, ಡಿ.ಡಿ.ಎಮ್ ಲೋಕೇಶ್ ಸೇರಿದಂತೆ ಪಾಲಿಕೆ ವಾಹನ ವಿಭಾಗದ ವೆಂಕಟೇಶ ಕುಲಕರ್ಣಿ ಹಾಗೂ ಪಾಲಿಕೆ ಆರೋಗ್ಯ ನಿರೀಕ್ಷಣಾಧಿಕಾರಿಗಳು ಸಭೆಯಲ್ಲಿದ್ದರು.

## ಮಕ್ಕಳ ಶಿಕ್ಷಣಕ್ಕೆ ಸ್ಫೂರ್ತಿ: ಧನಂಜಯ

ಅಂಗನವಾಡಿ ಕೇಂದ್ರಗಳಿಗೆ ಜಾಗವನ್ನು ಗುರುತಿಸುವುದು. ಹೀಗೆ ಹಲವಾರು ಸಮಸ್ಯೆಗಳನ್ನ ಹೇಳಿಕೊಂಡರು ಹಾಗೆಯೇ ಕಳೆದ ವರ್ಷ ಮಾಡಿದ ಉತ್ತಮ ಕೆಲಸ ಕಾರ್ಯದ ಬಗ್ಗೆ ಸ್ಥಳೀಯ ಸರ್ಕಾರಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.ಈ ಎಲ್ಲಾ ಸಮಸ್ಯೆಗಳನ್ನು ಆಲಿಸಿದ ನಂತರ ಗ್ರಾಮ ಪಂಚಾಯಿತಿಯ ಕರಹೊಸಲಿಗಾರ ರಾಮಚಂದ್ರ ಮಕ್ಕಳಿಗೆ 2025–2026 ಸಾಲಿನಲ್ಲಿ ಕೈಗೊಂಡ ಕ್ರಿಯಾಯೋಜನೆ ವರದಿಯನ್ನು ಮಂಡಿಸಿದರು ನಂತರ ಎಲ್ಲಾ ಮಕ್ಕಳಿಗೆ ಅಭಿನಂದನೆ ಸಲ್ಲಿಸಿ ಬಳಿಕ 10ನೇ ತರಗತಿಯಲ್ಲಿ ಅತ್ಯುನ್ನತ ಸ್ಥಾನಗಳಿಸಿರುವ ಎಲ್ಲಾ ಮಕ್ಕಳಿಗೆ ಬಹುಮಾನವನ್ನು ಕೊಡುದಾಗಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಧನಂಜಯ ಅವರು ಮಕ್ಕಳಿಗೆ ಉರಿದುಂಬಿಸಿದರು. ಎಲ್ಲಾ ಮಕ್ಕಳಿಗೆ ಸಿಹಿ ತಿಂಡಿ ಹಂಚಿಶುಭ ಕೋರಿದರು.

ಈ ಸಂದರ್ಭದಲ್ಲಿ ಹನುಮಂತರಾಯ, ಶಾಲಾ ಮುಖ್ಯೋಪಾಧ್ಯಾಯ ಶಿವಜಾತಪ್ಪ, ಸರಕಾರಿ ಪ್ರೌಢ ಶಾಲೆ ಮುಖ್ಯೋಪಾಧ್ಯಾಯ ಆನಂದ ನಾಯಕ, ಸಮೂಹ ಸಂಪನ್ಮೂಲ ವ್ಯಕ್ತಿ ಶ್ರೀಶೈಲ, ಗ್ರಾಮ ಪಂಚಾಯತ್ ಸದಸ್ಯ ಮಲ್ಲಿಕಾರ್ಜುನ ಮುಷ್ಟೂರು, ಅಂಗನವಾಡಿ ಹಿರಿಯ ಕಾರ್ಯಕರ್ತೆ ಚನ್ನಬಸ್ಸಮ್ಮ ಮುಷ್ಟೂರ್ ಸೇರಿದಂತೆ ಶಾಲಾ ಎಸ್ ಡಿ ಎಂ ಸಿ ಅಧ್ಯಕ್ಷ, ಉಪಾಧ್ಯಕ್ಷ ಸೇರಿದಂತೆ ಆಶಾ ಅಂಗನವಾಡಿ ಕಾರ್ಯಕರ್ತರು ಶಾಲಾ ಸಿಬ್ಬಂದಿಗಳು ಹಾಗೂ ಮಕ್ಕಳು ಇದ್ದರು

## ಸಿಂಗಾಪುರದಲ್ಲಿ ಕಲಬುರಗಿ ಕಲಾವಿದರ ಚಿತ್ರಕಲಾ ಪ್ರದರ್ಶನ

ಕಲಬುರಗಿ ಹಿರಿಯ ಕಲಾವಿದ ಬಸವರಾಜ್ ಆರ್ ಉಪ್ಪಿನ್ ಇವರು ಹೆಸರಾಂತ ಕಲಾವಿದರಲ್ಲಿ ಒಬ್ಬರು ಇವರು ಸುಮಾರು 60 ವರ್ಷಗಳಿಂದ ಸತತವಾಗಿ ಕಲಾಕ್ಷೇತ್ರದಲ್ಲಿ ತಮ್ಮದೇ ಆದಂತಹ ಒಂದು ಕೊಡುಗೆ ನೀಡಿದ್ದಾರೆ ಅಷ್ಟೇ ಅಲ್ಲದೆ ಒಂದು ಲಲಿತಕಲಾ ಅಕಾಡೆಮಿ ವತಿಯಿಂದ ಗೌರವ ಪ್ರಶಸ್ತಿ ಪಡೆದು ಹಾಗೂ ಕರ್ನಾಟಕ ರಾಜೋತ್ಸವ ಪ್ರಶಸ್ತಿಪುರಸ್ಕೃತ ಕಲಬುರ್ಗಿ ನಾಡಿಗೆ ಒಂದು ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಇವರ ಕಲಾಕೃತಿಗಳಲ್ಲಿ ಪ್ರಕೃತಿಯ ಹೊಸ ಹೊಸ ಆಯಾಮಗಳು ಹಾಗೂ ಬಣ್ಣಗಳ ಸಂಯೋಜನೆಯೊಂದಿಗೆ ತಮ್ಮ ಕಲಾಕೃತಿಗಳಲ್ಲಿ ಅಮೂರ್ತದೊಂದಿಗೆರೂಪಿಸಿದ್ದಾರೆ ಇಂಥ ಅಪರೂಪದ ಕಲಾವಿದರಾದ ಬಸವರಾಜ್ ಉಪ್ಪಿನ್ ಇವರ ಕಲಾಕೃತಿಗಳು ಇಲ್ಲಿ ಜನರ ಮನ ಗೆದ್ದಿದ್ದಾರೆ.

ಇದರಂತೆ ಕಲಬುರ್ಗಿಯ ಹಿರಿಯ ಕಲಾವಿದ ರಾಜಶೇಖರ್ ಶಾಮಣ್ಣ ಇವರು ಹೆಸರಾಂತ ಕಲಾವಿದರಲ್ಲಿ ಕೂಡ ಒಬ್ಬರು ಸತತ 30 ವರ್ಷ ತನ್ನದೇ ಆದಂತಹ ಒಂದು ಸೃಜನಶೀಲ ಕಲೆಯನ್ನು ರೂಪಿಸಿಕೊಂಡು ಹಲವಾರು ಕಲಾಕೃತಿಗಳು ರಚಿಸುತ್ತಾ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ತಮ್ಮ ಕಲಾಪ್ರದರ್ಶನವನ್ನು ಕಲಾಕೃತಿಗಳನ್ನು ಪ್ರದರ್ಶಿಸಿದ್ದಾರೆ ಇವರ ಕಲಾಕೃತಿಗಳು ಪ್ರಕೃತಿಯ ಹೊಸ ಆಯಾಮಗಳು ಪ್ರಕೃತಿಯ ನೋವು ನಲಿವು ಮುಂದಿನ ದಿನಗಳಲ್ಲಿ ಪ್ರಕೃತಿ ಉಳಿಸಿ ಎಂಬ ಜಾಗೃತಿ ಮೂಡಿಸುವಂತಹ ಕಲಾಕೃತಿಗಳು ಅಪರೂಪವಾದ ಸಂಗತಿಯಾಗಿದೆ.

ಕಲಬುರಗಿ ಭಾಗದ ಡೈನಮಿಕ್ ಕಲಾವಿದ ಎಂದೇ ಹೆಸರು ಪಡೆದ ಮತ್ತು ಕನ್ನಡ ಚಿತ್ರರಂಗಕ್ಕೆ ನಟನೆಯಲ್ಲಿ ನಿರ್ದೇಶಕರಾಗಿ ಯಶಸ್ವಿಯಾಗಿರುವ ಕಲಾವಿದ ನಾಗರಾಜ್ ಕುಂಬಾರ್ ಇವರು ಕೂಡ ಈ ಪ್ರದರ್ಶನದಲ್ಲಿ ಭಾಗವಹಿಸಲಿದ್ದಾರೆ

ಚಿತ್ರಕಲಾವಿದ ಬರಹಗಾರಹಾಗೂ ಚಿತ್ರ ನಟ ನಿರ್ದೇಶಕರಾಗಿ ಕಲಬುರ್ಗಿ ಭಾಗಕ್ಕೆ ಅಪಾರ ಕೊಡಿಗೆಯನ್ನು ನೀಡಿದ್ದ ಒಬ್ಬ ಅಪರೂಪ ಕಲಾವಿದ ಎಂದರೆ ನಾಗರಾಜ್ ಕುಂಬಾರ್ ಇವರು ಇವರು ತಮ್ಮ ಕಲಾಕೃತಿಗಳಲ್ಲಿ ಬದುಕಿನ ಹಾಗೂ ಸಾಮಾಜಿಕ ಅಂಕುಡೊಂಕುಗಳ ವಾಸ್ತವಿಕತೆಯನ್ನು ತನ್ನ ಸೃಜನಶೀಲತೆಯಿಂದ ತಮ್ಮ ಕಲಾಕೃತಿಗಳಲ್ಲಿ ಮೂಡಿಸಿದ್ದಾರೆ ನಾಗರಾಜ್ ಕುಂಬಾರ ಇವರ ಕಲಾ ಬದುಕು ಹಾಗೂ ನಾಡಿನ ಪೀಳಿಗೆಗೆ ಒಂದು ಮಾದರಿಯಾಗಲಿ ಎಂದು ಹಾರೈಸುತ್ತಾ ಯಶಸ್ವಿಯಾಗಿ ಹೊರಬರಲಿ ಎಂದು ನಮ್ಮೆಲ್ಲರ ಹಾರೈಕೆ ಅದೇ ರೀತಿ ಈ ಪ್ರದೇಶದಲ್ಲಿ ಭಾಗವಹಿಸಿರುವ ಎಲ್ಲಾ ಕಲಾವಿದರು ಯಶಸ್ವಿಯಾಗಲಿ ಎಂದು ಸ್ನೇಹಿತರು ಹಾಗೂ ಕಲಾವಿದರ ಬಳಗ ಅಭಿನಂದನೆಗಳು ಹಿರಿಯ ಚಿತ್ರಕಲಾವಿದ ಮತ್ತು ಪತ್ರಿಕಾ ಛಾಯಾಗ್ರಾಹಕ ನಾರಾಯಣ ಎಂ ಜೋಶಿ ಅವರು ತಿಳಿಸಿದ್ದಾರೆ.

## ಈಗಲೂ ನಾನೇ ಸಿಎಂ, ಮುಂದೆಯೂ ನಾನೇ ಸಿಎಂ : ಸಿದ್ದರಾಮಯ್ಯ

ಇದಕ್ಕೆ ಸ್ಪಷ್ಟನೆ ನೀಡಿದ ಮುಖ್ಯಮಂತ್ರಿ ಅವರು ಇದು ಗಾದೆ ಮಾತು ಎಂದು ಸ್ಪಷ್ಟನೆ ನೀಡಿದರು. ಆಗ ಮಧ್ಯಪ್ರವೇಶಿಸಿದ ಸುನೀಲ್‌ಕುಮಾರ್ ನೀವು ಹೇಳಿದ್ದು ಗಾದೆ ಮಾತೋ ಅಥವಾ ಮನಸ್ಸಿನಲ್ಲಿರುವ ಮಾತು ಹೇಳಿದ್ದಿರೋ ಎಂದು ಸ್ಪಷ್ಟನೆಯನ್ನು ಕೇಳಿದರು.ಮುಖ್ಯಮಂತ್ರಿ ಸಿದ್ದರಾಮಯ್ಯಮಾತು ಮುಂದುವರಿಸಿ, 2018ರಲ್ಲಿ ನಮಗೆ ಜನಾದೇಶವಿರಲಿಲ್ಲ. ನಾವು ಜೆಡಿಎಸ್? ಮನೆ ಬಾಗಿಲಿಗೆ ಹೋಗಿರಲಿಲ್ಲ, ನೀವು(ಬಿಜೆಪಿ) ಏಕೆ ಅವರ ಜೊತೆ ಹೋಗಿದ್ದೀರಿ? ಎಂದು ಪ್ರಶ್ನಿಸಿದರು.

ಇದೇ ರೀತಿ ಬಿಜೆಪಿ ಶಾಸಕರು ಮತ್ತು ಮುಖ್ಯಮಂತ್ರಿಗಳ ನಡುವೆ ವಾಗ್ವಾದ ನಡೆಯಿತು. ಮುಖ್ಯಮಂತ್ರಿ ನೀವು ಹಿಂಬಾಗಿಲ ಮೂಲಕ, ಆಪರೇಷನ್ ಕಮಲದ ಮೂಲಕ ಅಧಿಕಾರಕ್ಕೆ ಬಂದಿದ್ದೀರಿ, 140 ಶಾಸಕರು ನಮ ಜತೆಯೇ ಇದ್ದಾರೆ. ನೀವು ಹುಳಿ ಹಿಂಡಬೇಡಿ, 2028ರ ಚುನಾವಣೆಯಲ್ಲೂ ನಾವೇ ಅಧಿಕಾರಕ್ಕೆಣಟಿಜಜಜಿಟಿಜಜ ಬರುತ್ತೆ?ವೆ. ನಿಮಗೆ ವಿರೋಧಪಕ್ಷವೇ ಗ್ಯಾರಂಟಿ ಎಂದು ಹೇಳಿದರು.

ಒಂದು ಹಂತದಲ್ಲಿ ಅವರು ಸುಮನಿದ್ದರೂ, ನೀವು ಸುಮನಿರಲ್ಲ. ವಿರೋಧ ಪಕ್ಷ ಇರುವುದೇ ಉಪ್ಪು ಹಾಕಲು, ಕಿತಾಪತಿಗೆ ಪ್ರಚೋದನೆ ಮಾಡಲು. ನೀವು ಏನೇ ಮಾಡಿದರೂ ನಮವರು ಪ್ರಚೋದೆಗೆ ಒಳಗಾಗಲ್ಲ. ಜನರು ನಮಗೆ ಆಶೀರ್ವಾದ ಮಾಡಿ ಸರ್ಕಾರದಲ್ಲಿ ಇರಿ ಎಂದು ಹೇಳಿದ್ದಾರೆ. ನಾವೇ ಇರುತ್ತೆವೆ. ಈ ಬಗ್ಗೆ ನಿಮಗೆ ಅನುಮಾನ ಬೇಡ ಎಂದರು. ಗೃಹ ಸಚಿವ ಪರವಮೇಶ್ವರ್ ಮಾತನಾಡಿ,ಜನರು 5 ವರ್ಷ ಅಧಿಕಾರ ನಡೆಸಲು ಆಶೀರ್ವಾದ ಮಾಡಿದ್ದಾರೆ,, ಅದರಂತೆ ನಾವು ಅಧಿಕಾರವಧಿಯನ್ನು ಸಂಪೂರ್ಣಗೊಳಿಸುತ್ತೆವೆ ಎಂದು ಹೇಳ ಬಯಸಿದರು.

ಮಾತು ಮುಂದುವರಿಸಿದ ಮುಖ್ಯಮಂತ್ರಿಸಿದ್ದರಾಮಯ್ಯ, ಹೈಕಮಾಂಡ್ ಹೇಳಿದ ಹಾಗೇ ಕೇಳುತ್ತೆವೆ, ನಿಮಲ್ಲಿ ಹೇಗೆ ಅಧ್ಯಕ್ಷ ಸ್ಥಾನಕ್ಕೆ ಪೈಪೋಟಿ ನಡೆಯುತ್ತಿದೆ. ನಮ ಅಧಿಕಾರ ನೋಡಿ ಹೊಟ್ಟೆ ಕಿಚ್ಚು ಪಡುತ್ತಿದ್ದೀರಿ ಎಂದು ವಿಪಕ್ಷವನ್ನು ಛೇಡಿಸಿದರು. ಅಶೋಕ್ ಮಾತನಾಡಿ, ಪೂಜೆ ಪುನಸ್ಕಾರ ಮಾಡುತಿದ್ದೀರಿ, ಜೆಡಿಎಸ್ ಅವರ ಬಾಗಿಲಿಗೆ ಹೋಗಿದ್ದರು ಎಂದು ಹೇಳುತ್ತಾರೆ ಎಂದು ಮಾತಿಗೆಳೆದು, ಒಂದು ದಿನ ಅವರೇ ಉಪ್ಪು ಹಾಕುತ್ತಾರೆ ಎಂದರು.ಮುಖ್ಯಮಂತ್ರಿ ಮಾತು ಮುದುವರಿಸಿ, ನಮಲ್ಲಿ ಹೈಕಮಾಂಡ್ ಮಾತಿನಂತೆ ನಡೆದುಕೊಳ್ಳುತ್ತೆ?ವೆ. ಜನಾಶೀರ್ವಾದ ಇದೆ. ನಿಮಗೆ ಒಮೆಯೂ ಮಾಡಿಲ್ಲ ಮುಂದೆಯೂ ಮಾಡುವುದೂ ಇಲ್ಲ. ನಿಮಗೆ ವಿಪಕ್ಷವೇ ಶಾಶ್ವತ, ನೀವು ಜೆಡಿಎಸ್ ಅವರ ಜೊತೆ ಹೋಗಿರಲಿಲ್ಲವೇ ಎಂದು ತಿರುಗೇಟು ನೀಡಿದರು.ಒಂದು ಹಂತದಲ್ಲಿ ವಿಪಕ್ಷದ ಉಪ ನಾಯಕ ಅರವಿಂದ್ ಬೆಲ್ಲದ ಮಾತನಾಡಿ, ಹೈಕಮಾಂಡ್ ಡಿಸಿಎಂ ಅವರಿಗೆ ಏನೂ ಹೇಳಲಿಲ್ಲ ಎಂದರು. ಸುರೇಶ್‌ಕುಮಾರ್ ಮಾತನಾಡಿ, ನಾನು ಎಂಬ ಏಕವಚನದಿಂದ ನಾವು ಎಂಬ ಬಹುವಚನದವರೆಗೆ ಎಂಬಂತಿದ್ದೀರಿ ಎಂದು ಕನಕದಾಸರ ವಾಣಿಯೊಂದನ್ನು ಉಲ್ಲೆಖಿಸಿದರು.ಆಗ ಮಾತನಾಡಿದ ಸಿಎಂ, ನಾನು ಹೋದರೆ ಹೋದೇನು ಎಂಬುದು ಕನಕದಾಸರವಾಣಿ ಎಂದರಲ್ಲದೇ, ನಾನೇ ಈಗ ಸಿಎಂ, ಮುಂದೆಯೂ ಸಿಎಂ ಎಲ್ಲಿಯವರೆಗೆ ಹೈಕಮಾಂಡ್ ಮುಂದುವರಿಯಲು ಹೇಳುತ್ತೊ? ಎಂದು ಮಾತು ಮುಂದುವರಿಸುತ್ತಿದ್ದಾಗ ಮಧ್ಯಪ್ರವೇಶಿಸಿದ ಸುನೀಲ್ ಕುಮಾರ್ ಇದನ್ನೆ? ನಾವು ಕೇಳಿದ್ದು ಎಂದರು.ಶಾಸಕ ಬಸವನಗೌಡ ಯತ್ನಾಳ್ ಮಾತನಾಡಿ, ಐದು ವರ್ಷ ಮುಖ್ಯಮಂತ್ರಿ ಯಾರು? ಸಿದ್ದರಾಮಯ್ಯ ಅವರೇ ಆಗಿರುತ್ತಾರೋ, ಇಲ್ಲವೋ ಎಂಬುದನ್ನು ಖಚಿತಪಡಿಸಬೇಕು ಎಂದು ಆಗ್ರಹಿಸಿದರು.

ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಮಾತನಾಡಿ, ನಿಮ ಪಕ್ಷದ ಬಿಎಸ್‌ಯಡಿಯೂರಪ್ಪ ಅವರನ್ನು 3 ಬಾರಿ ಏಕೆ ಬದಲಾಯಿಸಿದ್ದೀರಿ ಎಂದು ಕೇಳಿದರು. ಆಗ ಅಶೋಕ್ ಮಾತನಾಡಿ, ನಾನು ಪುಸ್ತಕ ಬರೆಯಬೇಕು ಎಂದು ಕೊಂಡಿದ್ದೇನೆ. ಚಾಣಕ್ಯ ತಂತ್ರ ಅಂದರೆ ಸಿದ್ದರಾಮಯ್ಯ ಅವರ ಚಾಣಕ್ಯ ತನದ್ದಾಗಿದೆ ಎಂದರು. ಒಂದು ಇರುವೆ ಬೇಲಿಗೆ ಹೋಗಬೇಕು ಎಂದು ಬರುತ್ತದೆ ಎಂದು ಹೇಳಿದಾಗ ಸದನದಲ್ಲಿ ಗದ್ದಲ ಉಂಟಾಯಿತು,ಗೊಂದಲದ ನಡುವೆಯೇ ಮಾತನಾಡಿದ ಅಶೋಕ್, ಇರುವೆ ರಾಹುಲ್‌ಗಾಂಧಿ ಅವರ ಜೇಬು ಸೇರಿದೆ ಎಂದು ವ್ಯಂಗ್ಯವಾಡಿದರು, ಇದಕ್ಕೆ ಸಚಿವ ಕೃಷ್ಣ ಭೈರೇಗೌಡ ಪ್ರತಿಕ್ರಿಯಿಸಿ ಮೊದಲು ನೀವು ಪುಸ್ತಕ ಬರೆಯಿರಿ ಎಂದರು. ಸಭಾಧ್ಯಕ್ಷರಾದ ಯು ಟಿ ಖಾದರ್ ಮದ್ಯಪ್ರವೇಶಿಸಿ, ಈ ವಿಚಾರದ ಚರ್ಚೆಗೆ ತೆರೆ ಎಳೆದು ಮುಂದಿನ ಕಾರ್ಯ ಕಲಾಪವನ್ನು ಮುಂದುವರೆಸಿ ಎಂದರು.

# ಅಕ್ರಮ ಕಲ್ಲಿದ್ದಲು ದಂದೆ ನಿಲ್ಲಿಸಬೇಕೆಂದು ದಲಿತ ಸೇನೆ ಮನವಿ



ಯುವಮಾರ್ಗ ಸುದ್ದಿ

**ರಾಯಚೂರು,ಡಿ.16–** ತಾಲ್ಲೂಕಿನ ವೈ.ಟಿ.ಪಿ.ಎಸ್ ಥರ್ಮಲ್ ಪವರ್ ಕಾರ್ಖಾನೆಗೆ ಸಂಬಂಧಪಟ್ಟಂತೆ ನಡೆಯುತ್ತಿರುವ ಅಕ್ರಮ ಕಲ್ಲಿದ್ದಲು ಸಾಗಾಟ ಮತ್ತು ಭಾರೀ ಭ್ರಷ್ಟಾಚಾರ ಪ್ರಕರಣದಲ್ಲಿ ಭಾಗಿಯಾಗಿರುವ ಅಧಿಕಾರಿಗಳು ಹಾಗೂ ಖಾಸಗಿ ಕಂಪನಿಯ ಇನ್‌ಚಾರ್ಜ್‌ಗಳ ವಿರುದ್ಧ ಸೂಕ್ತ ತನಿಖೆ ನಡೆಸಿ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ದಲಿತ ಸೇನೆ ಜಿಲ್ಲಾ ಸಮಿತಿ ರಾಯಚೂರು ವತಿಯಿಂದ ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ.

ಈ ಕುರಿತು ಮಾತನಾಡಿದ ದಲಿತ ಸೇನೆ ಜಿಲ್ಲಾಧ್ಯಕ್ಷ ಮಾರುತಿ ಚಿಕ್ಕಸೂಗೂರು, ವೈಟಿಪಿಎಸ್ ಕಾರ್ಖಾನೆಯೊಳಗೆ ಬರುವ ಕಲ್ಲಿದ್ದಲು ಸಾಗಾಟದಲ್ಲಿ ಗಂಭೀರ ಅಕ್ರಮಗಳು ನಡೆಯುತ್ತಿದ್ದು, ಕಾರ್ಖಾನೆಗೆ ಬಂದ ಕಲ್ಲಿದ್ದಲು ವ್ಯಾಗನ್‌ಗಳನ್ನು ಪೂರ್ಣ ಪ್ರಮಾಣದಲ್ಲಿ ಖಾಲಿ ಮಾಡದೆ, ಅಲ್ಪ ಪ್ರಮಾಣ ಉಳಿಸಿಕೊಂಡು ಕಾರ್ಖಾನೆಯ ಹೊರಗಡೆ ತಂದು ಯರಮರಸ್ ರೈಲ್ವೇ ನಿಲ್ದಾಣದ ಬಳಿ ಸಂಪೂರ್ಣ ಖಾಲಿ ಮಾಡಿ, ಇಟಂಗಿ ಬಟ್ಟಿಗಳು ಸೇರಿದಂತೆ ಕೆಲವು ಸಣ್ಣ ಕಾರ್ಖಾನೆಗಳು ಹಾಗೂ ಅನಾಮಿಕರಿಗೆ ದಿನನಿತ್ಯ ಲಕ್ಷಾಂತರ ರೂಪಾಯಿಗಳಿಗೆ ಕಲ್ಲಿದ್ದಲು ಮಾರಾಟ ಮಾಡಲಾಗುತ್ತಿದೆ ಎಂಬ ಆರೋಪಗಳನ್ನು ಹೊರಿಸಿದರು. ಇದೊಂದು ಸಂಘಟಿತ ದೊಡ್ಡ ದಂದೆಯಾಗಿದ್ದು, ನೂರಾರು ಕೋಟಿ ರೂಪಾಯಿಗಳ ಭ್ರಷ್ಟಾಚಾರ ನಡೆದಿರುವ ಶಂಕೆಯಿದೆ ಎಂದು ಅವರು ತಿಳಿಸಿದರು.

ಈ ಅಕ್ರಮ ವ್ಯವಹಾರದಲ್ಲಿ ವೈಟಿಪಿಎಸ್‌ನ ಹಿಂದಿನ ಕಾರ್ಯನಿರ್ವಾಹಕ ನಿರ್ದೇಶಕರಾದ ಗಂಗಾಧರ (ಹಾಲಿ ಟಿ.ಡಿ., ಬೆಂಗಳೂರು), ಸೆಕ್ಯೂರಿಟಿ ಇನ್‌ಚಾರ್ಜ್ ಎಇಇ ರವೀಶ್ ಹಾಗೂ ಪವರ್‌ಮ್ಯಾಕ್ ಕಂಪನಿ ಇನ್‌ಚಾರ್ಜ್ ಸುರೇಂದ್ರ ಅವರು ಪರಸ್ಪರ ಕೈಜೋಡಿಸಿ ನೇರವಾಗಿ ಪಾಲುದಾರರಾಗಿದ್ದಾರೆ ಎಂಬ ಆರೋಪಗಳು ಈಗಾಗಲೇ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದ್ದು, ಪಬ್ಲಿಕ್ ಟಿವಿ ಸೇರಿದಂತೆ ಅನೇಕ ಮಾಧ್ಯಮಗಳಲ್ಲಿ ಈ ಕುರಿತು ಹಲವು ಬಾರಿ ಪ್ರಸಾರವಾಗಿರುವುದನ್ನೂ ಅವರು ಉಲ್ಲೇಖಿಸಿದರು. ಇಂತಹ ಆರೋಪಗಳ ನಡುವೆಯೂ ಗಂಗಾಧರ ಅವರಿಗೆ ಟಿ.ಡಿ. ಹುದ್ದೆಗೆ ಮುಂಬಡ್ತಿ ನೀಡಿರುವುದು ಕಾನೂನುಬಾಹೀರ ಮತ್ತು ಅನುಮಾನಾಸ್ಪದವಾಗಿದೆ ಎಂದು ಮಾರುತಿ ಚಿಕ್ಕಸೂಗೂರು ಹೇಳಿದರು.

ವೈಟಿಪಿಎಸ್ ಮತ್ತು ಆರ್‌ಟಿಪಿಎಸ್ ಥರ್ಮಲ್ ಪವರ್ ಘಟಕಗಳು ರಾಷ್ಟ್ರಮಟ್ಟದಲ್ಲಿ ಐಎಎಸ್ ಅಧಿಕಾರಿಗಳ ಆಡಳಿತ ವ್ಯಾಪ್ತಿಗೆ ಒಳಪಟ್ಟಿದ್ದರೂ, ಜಿಲ್ಲಾಮಟ್ಟದಲ್ಲಿ ಯಾವುದೇ ಅಹಿತಕರ ಘಟನೆಗಳು ಹಾಗೂ ಕುಂದುಕೊರತೆಗಳಿಗೆ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ದಂಡಾಧಿಕಾರಿಗಳೇ ನೇರ ಹೊಣೆಗಾರರಾಗುತ್ತಾರೆ. ಆದ್ದರಿಂದ ಕಲ್ಲಿದ್ದಲು ಸಾಗಾಟ, ಪವರ್‌ಮ್ಯಾಕ್ ಕಂಪನಿಗೆ ಅಕ್ರಮವಾಗಿ ಸಂದಾಯವಾಗಿರುವ ಬೋಗಸ್ ಬಿಲ್ಲುಗಳು ಹಾಗೂ ಕಾರ್ಖಾನೆಯ ನಿರ್ವಹಣೆಯಲ್ಲಿ ನಡೆದಿರುವ ಹಗರಣಗಳ ಕುರಿತು ಸಮಗ್ರ, ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಅವರು ಆಗ್ರಹಿಸಿದರು.

ಕಾರ್ಖಾನೆಗೆ ಸಂಬಂಧಪಟ್ಟ ಎಂ.ಡಿ. ಅವರೊಂದಿಗೆ ಕೂಲಂಕಷವಾಗಿ ಚರ್ಚಿಸಿ, ಅಕ್ರಮಗಳಲ್ಲಿ ಶಾಮಿಲ್ ಆಗಿರುವ ಅಧಿಕಾರಿಗಳು ಹಾಗೂ ಕಂಪನಿ ಪ್ರತಿನಿಧಿಗಳ ವಿರುದ್ಧ ಕೂಡಲೇ ತನಿಖೆ ನಡೆಸಿ, ತಪ್ಪಿತಸ್ಥರ ಮೇಲೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ದಂಡ ವಿಧಿಸಬೇಕು ಎಂದು ದಲಿತ ಸೇನೆ ಜಿಲ್ಲಾ ಸಮಿತಿ ರಾಯಚೂರು ವತಿಯಿಂದ ಮಾನ್ಯ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಲಾಗಿದೆ.

ಈ ಸಂದರ್ಭದಲ್ಲಿ ದಲಿತ ಸೇನೆ ರಾಜ್ಯ ಸಂಘಟನಾ ಕಾರ್ಯದರ್ಶಿ ಡಾ.ಜಾವೀದ್ ಖಾನ್, ಸುರೇಶಬಾಬು, ಬಾಬು, ಬಾವುದ್ದೀನ್ ಸೇರಿದಂತೆ ಇನ್ನಿತರರು ಇದ್ದರು

## ಹುಟ್ಟುಹಬ್ಬ ಶುಭಾಶಯ ಕೋರಿದ ಪ್ರಧಾನಿ ಮೋದಿ : ಭಾವುಕರಾಗಿ ಧನ್ಯವಾದ ಹೇಳಿದ ಹೆಚ್ಡಿಕೆ

**ಬೆಂಗಳೂರು,ಡಿ.16–** ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಹುಟ್ಟುಹಬ್ಬಕ್ಕೆ ಪ್ರಧಾನಮಂತ್ರಿ ನರೇಂದ್ರಮೋದಿ ಅವರು ಶುಭಾಶಯ ಕೋರಿದ್ದಾರೆ.ನನ್ನ ಹುಟ್ಟು ಹಬ್ಬದ ಸಂದರ್ಬದಲ್ಲಿ ಮೋದಿ ಅವರ ಶುಭಾಶಯ ಹಾಗೂ ಶುಭಾಶೀರ್ವಾದದಿಂದ ನಾನು ಭಾವುಕನಾಗಿದ್ದೇನೆ ಮತ್ತು ವಿನೀತನಾಗಿದ್ದೇನೆ. ಅವರ ಪಿತೃವಾತ್ಸಲ್ಯಕ್ಕೆ ನಾನು ಧನ್ಯನಾಗಿದ್ದೇನೆ ಎಂದು ಕುಮಾರಸ್ವಾಮಿ ತಿಳಿಸಿದ್ದಾರೆ.



ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರಧಾನಿಗಳ ಚಿಂತನಶೀಲ ಮಾರ್ಗದರ್ಶನ, ಪ್ರೋತ್ಸಾಹ ಮತ್ತು ನನ್ನ ಮೇಲಿನ ನಂಬಿಕೆಗೆ ನಾನು ಚಿರಋಣಿ ಆಗಿದ್ದೇನೆ ಎಂದಿದ್ದಾರೆ. ಪ್ರಧಾನಮಂತ್ರಿಗಳ ಶುಭಾಶೀರ್ವಾದ ಮತ್ತು ಸಂದೇಶವು, ಸಾರ್ವಜನಿಕ ಸೇವೆಯು ಕೇವಲ ಒಂದು ಜವಾಬ್ದಾರಿಯಲ್ಲ, ಬದಲಿಗೆ ರಾಷ್ಟ್ರ, ಸಮಾಜ ಮತ್ತು ಸಾರ್ವಜನಿಕರ ಕಲ್ಯಾಣಕ್ಕಾಗಿ ಜೀವಮಾನದ ಅನನ್ಯ ಸಮರ್ಪಣೆಯಾಗಿದೆ ಎಂಬುದನ್ನು ನೆನಪಿಸುತ್ತದೆ.

## ಮಕ್ಕಳ ಪ್ರತಿಭೆ ಅನಾವರಣಕ್ಕೆ ಪ್ರತಿಭಾ ಕಾರಂಜಿ ಮುಖ್ಯ –ಸೌಮ್ಯಶ್ರೀ ಈಶಾನ್ಯ ಟೈಮ್ಸ್ ವಾರ್ತೆ. ಡಿ



ಯುವಮಾರ್ಗ ಸುದ್ದಿ

**ಕವಿತಾಳ,ಡಿ.16–**ಶಾಲಾ ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಹೊರ ಹಾಕಲು ಪ್ರತಿಭಾ ಕಾರಂಜಿ ತುಂಬಾ ಮುಖ್ಯವೆಂದು ಕವಿತಾಳ ವಲಯದ ಸಂಪನ್ಮೂಲ ಅಧಿಕಾರಿ ಸೌಮ್ಯಶ್ರೀ ಹೇಳಿದರು.ಜಿಪಂ. ರಾಯಚೂರು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ರಾಯಚೂರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಮಾನ್ವಿ ಕ್ಷೇತ್ರಸಮನ್ವಯಾಧಿಕಾರಿಗಳ ಕಾರ್ಯಾಲಯ ಮಾನ್ವಿ, ಸಮೂಹ ಸಂಪನ್ಮೂಲ ಕೇಂದ್ರ ಕವಿತಾಳ ಇವರ ಸಹಯೋಗದಲ್ಲಿ ನವಚೇತನ ಅನುದಾನಿತ ಪ್ರಾಥಮಿಕ ಶಾಲಾ ಅವರಣದಲ್ಲಿ ಸೋಮವಾರ ಆಯೋಜಿಸಿದ್ದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮವನ್ನು ಉದ್ದೇಶಿಸಿ ಪ್ರಾಸ್ತವಿಕವಾಗಿ ಮಾತನಾಡಿದ ಅವರು ಸಿರವಾರ ತಾಲೂಕಿನ ಕವಿತಾಳ ವಲಯದಲ್ಲಿ 28ಕ್ಕೂ ಹೆಚ್ಚು ಪ್ರಾಥಮಿಕ, ಪ್ರೌಢಶಾಲೆ, ಅನಿದಾನಿತ, ಅನುದಾನರಹಿತ ಶಾಲೆಗಳು ಒಳಗೊಂಡಿರುತ್ತವೆ.

ಹೀಗಾಗಿ ಕರ್ನಾಟಕ ಸರ್ಕಾರವೂ 2002 ಇಸ್ವಿಯಲ್ಲಿ ಪ್ರತಿಭಾ ಕಾರಂಜಿ ಕಾರ್ಯಕ್ರಮ ಜಾರಿ ಮಾಡಿದೆ. ಶಾಲಾ ಮಕ್ಕಳಿಗೆ ಪಠ್ಯದ ಜೊತೆಗೆ ಪಠ್ಯತರ ಚಟುವಟಿಕೆಗಳಾದ ಸಂಗೀತ, ಚಿತ್ರಕಲೆ, ನೃತ್ಯ ಮಿಮಿಕ್ರಿ, ಕೈಯಿಂದ ಮಾದರಿ ತಯಾರಿ,ಭಾಷಣ,ಭಾವಗೀತೆ, ಭಕ್ತಿಗೀತೆ, ದೇಶಭಕ್ತಿಗೀತೆ ಇನ್ನಿತರ ಭಾಷಾಕೌಶಲ್ಯಗಳನ್ನು ಗುರ್ತಿಸುವುದೇ ಪ್ರತಿಭಾ ಕಾರಂಜಿ ಮುಖ್ಯಉದ್ದೇಶವೆಂದು ಹೇಳಿದರು. ವಂ. ಫಾದರ್ ಆರೋಗ್ಯದಾನಿ ಕಾರ್ಯಕ್ರಮ ಅಧ್ಯಕ್ಷತೆವಹಿಸಿದ್ದರು. ಆರಿಫ್ ಮಿಯಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿರವಾರ, ಜಾವಿದ್ ಪಾಷಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಿರವಾರ, ಮೌನೇಶ ಹಣಗಿ ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಿರವಾರ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು. ಸಂದರ್ಭದಲ್ಲಿ ಚೌರಮ್ಮ ಮುಖ್ಯೋಪಾಧ್ಯಾಯನಿ ನವಚೇತನ ಅನುದಾನಿತ ಪ್ರಾಥಮಿಕ ಶಾಲೆ, ಯೇಸುಮಿತ್ರ ಎಸ್ ಸಿ ನೌಕರರ ಸಂಘದ ಅಧ್ಯಕ್ಷ ಸಿರವಾರ, ಪಪಂ. ಅಧಿಕಾರಿ ರಾಘವೇಂದ್ರ ಮುತಾಲಿಕ, ಮುಖ್ಯಗುರುಗಳಾದ ಸೋಮಶೇಖರ್ ಮಲ್ಲದಗುಡ್ಡ ಅಯ್ಯನಗೌಡ,ಅಮರೇಶ ಪಾಟೀಲ ಹಣಗಿ,ಮಲ್ಲಿಕಾರ್ಜುನ ಶಿಕ್ಷಕರಾದ ಹಲ್ಲಪ್ಪಗಂಟಿ, ಹನುಮೇಶ ಮಡಿವಾಳ, ಸುದರ್ಶನ, ಮಹಾಂತೇಶ,ಹಾಗೂ ಕವಿತಾಳ ಸಿ ಆರ್ ಸಿ ವಲಯದ ಶಾಲಾ ಶಿಕ್ಷಕ ಶಿಕ್ಷಕಿಯರು ಶಾಲಾ ಮಕ್ಕಳು ಸೇರಿದಂತೆ ಇತರಿದ್ದರು.

# ಭ್ರೂಣ ಹತ್ಯೆ ತಡೆಗೆ ನೋಡಲ್ ಅಧಿಕಾರಿ ನೇಮಕ

**ಬೆಳಗಾವಿ, ಡಿ.16–**ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರತ್ಯೇಕ ನೋಡಲ್ ಅಧಿಕಾರಿಯೊಬ್ಬರನ್ನು ನೇಮಿಸಿ ಭ್ರೂಣ ಹತ್ಯೆ ತಡೆಗೆ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಆರೋಗ್ಯ ಸಚಿವರಾದ ದಿನೇಶ್ ಗುಂಡೂರಾವ್ ಮೇಲ್ಮನೆಯಲ್ಲಿ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿ ಸದಸ್ಯರಾದ ಸಿ.ಟಿ.ರವಿ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ರಾಜ್ಯದ ಕೆಲ ಜಿಲ್ಲೆಗಳಲ್ಲಿ, ಕೆಲ ಆಸ್ಪತ್ರೆಗಳಲ್ಲಿಯೇ ಗಂಡು ಸಂತಾನವು ಗರಿಷ್ಟ ಪ್ರಮಾಣದಲ್ಲಿ ದಾಖಲಾಗುತ್ತಿರುವುದನ್ನು ಗುಪ್ತಚರ ದಾಳಿಯ ಮೂಲಕ ಕಂಡುಕೊಳ್ಳಲಾಗುತ್ತಿದೆ ಎಂದು ಹೇಳಿದರು.
ಯಾವ ತಾಲೂಕಿನಲ್ಲಿ ಗಂಡು ಹೆಣ್ಣಿನ ಅನುಪಾತ ಹೆಚ್ಚುತ್ತಿದೆ

ಯಾವ ಆಸ್ಪತ್ರೆಯಲ್ಲಿ ಏನಾಗುತ್ತಿದೆ, ಎನ್ನುವಂತಹ ಅಂಶಗಳ ಮೇಲೆ ಮೇಲ್ವಿಚಾರಣೆ ನಡೆಸಿ, ಅಂತಹ ಜಾಲವನ್ನು ಹತ್ತಿಕ್ಕಲು ಸೂಕ್ತ ಕ್ರಮವಹಿಸುವುದಾಗಿ ಸಚಿವರು ತಿಳಿಸಿದರು.
ಪಿ.ಸಿ. & ಪಿ.ಎನ್.ಡಿ.ಟಿ. ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ 2024–25 ನೇ ಸಾಲಿನಲ್ಲಿ ಬಸ್ ಬ್ರ್ಯಾಡಿಂಗ್,



ಟ್ರೈನ್ ಬ್ರ್ಯಾಡಿಂಗ್, ಹೋರ್ಡಿಂಗ್ಸ್ ಗೋಡೆ ಬರಹ, ರೇಡಿಯೋ ಜಿಂಗಲ್ಸ್, ಟಿ.ವಿ. ಸ್ಪಾಟ್ಸ್ ಮುಖಾಂತರ ಸಾರ್ವಜನಿಕರಿಗೆ ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆಯ ಕುರಿತು ಅರಿವು ಮೂಡಿಸಲಾಗುತ್ತಿದೆ. ಪಿ.ಸಿ. & ಪಿ.ಎನ್.ಡಿ.ಟಿ. ಕಾಯ್ದೆಯ ಬಗ್ಗೆ ರಾಜ್ಯ ಮಟ್ಟದಿಂದ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಕಾಲಕಾಲಕ್ಕೆ ಅರಿವು ಮೂಡಿಸುವ ಕಾರ್ಯಾಗಾರವನ್ನು ನಡೆಸಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದರು.

# ಜೆಡಿಎಸ್ ರಾಜ್ಯ ಕಾಯುವ ಪಕ್ಷ: ರಮೇಶ್‌ಗೌಡ



**ಕೆಆರ್ ಪುರ,ಡಿ.16–** ಜೆಡಿಎಸ್ ಪಕ್ಷ ರಾಜ್ಯಹಿತ ಕಾಯುವ ಕಾಳಜಿವುಳ್ಳ ಪಕ್ಷವಾಗಿದ್ದು, ಪಕ್ಷಕ್ಕಾಗಿ ದುಡಿದವರಿಗೆ ಜೆಡಿಎಸ್ ನಲ್ಲಿ ಉತ್ತಮ ಸ್ಥಾನ ಲಭಿಸಲಿದೆ ಎಂದು ಜೆಡಿಎಸ್ ಬೆಂಗಳೂರು ನಗರ ಅಧ್ಯಕ್ಷ ರಮೇಶ್ ಗೌಡ ಅವರು ತಿಳಿಸಿದರು.

ಕ್ಷೇತ್ರದ ವಿಜಿನಾಪುರದಲ್ಲಿ ಹಮ್ಮಿಕೊಂಡಿದ್ದ ಜೆಡಿಎಸ್ ಪಕ್ಷ ಸೇರ್ಪಡೆ ಹಾಗೂ ಕೇಂದ್ರ ಸಚಿವ ಕುಮಾರ ಸ್ವಾಮಿಅವರ ಹುಟ್ಟು ಹಬ್ಬ ಆಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.
ಬೆಂಗಳೂರಿನಲ್ಲಿ ಜೆಡಿಎಸ್ ಪಕ್ಷ ಹಿಂದುಳಿದಿತ್ತು ಆದರೆ ಇದೀಗ ಹೊಸ ಅಧ್ಯಕ್ಷರುಗಳ ನೇಮಕದೊಂದಿಗೆ ಪುಟಿದೆದ್ದಿದೆ, ಪಕ್ಷ ಸಂಘಟನೆ ಕಾರ್ಯ ಸರ್ಮಪಕವಾಗಿ ಸಾಗಿದ್ದು ಚುನಾವಣಾ ಫಲಿತಾಂಶದಲ್ಲಿ ಬದಲಾವಣೆ ಪರ್ವ ಬೀರಲಿದೆ ಎಂದು ಹೇಳಿದರು.

ಕುಮಾರಸ್ವಾಮಿಯವರು ರೈತರಿಗಾಗಿ ಹಲವು ಯೋಜನೆಗಳನ್ನು ಜಾರಿಗೆ ತಂದು ಮನೆ ಮಾತಾಗಿದ್ದವರು, ಅವರ ಆಳ್ವಿಕೆಎಲ್ಲರಿವೂ ಮಾರ್ಗದರ್ಶನವಾಗಿದೆ ಎಂದು ಹೇಳಿದರು.
ಕೆಆರ್ ಪುರ ಕ್ಷೇತ್ರ ಜೆಡಿಎಸ್ ಅಧ್ಯಕ್ಷ ಲಕ್ಷ್ಮಣ್ ಮಾತನಾಡಿ, ಇದೇ 16 ರಂದು ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರ ಹುಟ್ಟು ಹಬ್ಬವಿದ್ದು ಅವರ ಹುಟ್ಟು ಹಬ್ಬವನ್ನು ವಿಜಿನಾಪುರ ಬಡ ಮಹಿಳೆಯರಿಗೆ ಸೀರೆ ವಿತರಿಸುವ ಮೂಲಕ ಆಚರಿಸಿದ್ದೇವೆ ಎಂದರು.

ವಿಜಿನಾಪುರದ ತೌಸಿಫ್ ಹಾಗೂ ಅವರ 250 ಕ್ಕೂ ಹೆಚ್ಚು ಸಂಘಡಿಗರು ಜೆಡಿಎಸ್ ಪಕ್ಷಕ್ಕೆ ಸೇರ್ಒಡೆಗೊಂಡಿದ್ದು ಪಕ್ಷ ಸಂಘಟನೆಯತ್ತ ಹೆಚ್ಚು ಗಮನ ನೀಡಲಿ ಎಂದು ಆಶಿಸಿದರು.
ಮಾಜಿ ಪ್ರಧಾನಿ ದೇವೇಗೌಡರು, ಕೇಂದ್ರ ಸಚಿವ ಕುಮಾರಸ್ವಾಮಿ, ನಿಖೀಲ್ ಕುವಾರಸ್ವಾಮಿ ಅವರು ಅಶೀರ್ವಾದಿಂದ ಬೆಂಗಳೂರಿನಲ್ಲಿ ಜೆಡಿಎಸ್ ಪಕ್ಷವನ್ನು ಘಟ್ಟಿಗೊಳಿಸುವ ಪಣ ತೊಟ್ಟಿದ್ದೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಹಿರಿಯ ಮುಖಂಡ ಬಾಲಣ್ಣ, ಸರ್ವ ನಗರ ಅಧ್ಯಕ್ಷ ಶಿವಕುಮಾರ್, ಮಹದೇವಪುರ ಅಧ್ಯಕ್ಷ ಓಬಳೇಶ್, ಮುಖಂಡರಾದ ಆರ್. ನಾಗರಾಜ್, ಯಾಸಿನ್, ರೆಡ್ಡಿ, ಶಿವಕುಮಾರ್ ಮತ್ತಿತರರಿದ್ದರು.

# ಬಳ್ಳಾರಿ ನಗರಕ್ಕೆ ಸಮರ್ಪಕ ನಾಗರಿಕ ಸೌಲಭ್ಯಗಳಿಗಾಗಿ ಮನವಿ



**ಬಳ್ಳಾರಿ, ಡಿ.16–** ನಗರವು, ಕಳೆದ ಮೂರು ದಶಕಗಳಿಂದ ನಾಲ್ಕು ದಿಕ್ಕುಗಳಲ್ಲಿ ವಿಸ್ತಾರಗೊಳ್ಳುತ್ತಲಿದೆ. ಜನಸಂಖ್ಯೆಯು ಗಣನೀಯವಾಗಿ ಹೆಚ್ಚಿದೆ. ಲಘು ವಾಹನಗಳ ಸಂಖ್ಯೆ ಹೆಚ್ಚಿದೆ. ಬಳ್ಳಾರಿ ಸುತ್ತಲೂ ಬೃಹತ್ ಮತ್ತು ಸಣ್ಣ ಕೈಗಾರಿಕೆಗಳ ಹೆಚ್ಚಳದಿಂದ ನಗರದ ಮುಖಾಂತರ 50–60 ಟನ್ ಭಾರದ ನೂರಾರು ವಾಹನಗಳು ದಿನಂಪ್ರತಿ ಚಲಿಸುತ್ತವೆ. ಆದರೆ ಈ ಬೆಳವಣಿಗೆಗೆ ತಕ್ಕಂತೆ, ಸೂಕ್ತ ನಾಗರಿಕ ಸೌಲಭ್ಯಗಳು ಸೃಷ್ಟಿಯಾಗಲಿಲ್ಲ. ಕೂಡಲೇ ನಾಗರೀಕ ಸೌಲಭ್ಯಗಳನ್ನು ಕಲ್ಪಿಸುವಂತೆ ಬಳ್ಳಾರಿ ನಾಗರಿಕ ಹೋರಾಟ ಸಮಿತಿ ಪಾಲಿಕೆಯ ಆಯುಕ್ತರಿಗೆ ಮನವಿ ಸಲ್ಲಿಸಿದೆ.

ತತ್ಫಲವಾಗಿ ಬಳ್ಳಾರಿ ನಗರವು ಹತ್ತಾರು ಸಮಸ್ಯೆಗಳ ಆಗರವಾಗಿದೆ. ಕುಣಿಗಳಿಂದ (Pot holes) ತುಂಬಿರುವ ರಸ್ತೆಗಳು, ನಗರಾದ್ಯಂತ ದೂಳಿನ ವಾತಾವರಣ, ಸ್ವಚ್ಛತೆಯ ಅಭಾವ, ಬೀದಿ ನಾಯಿಗಳ ಬಿಡಾಡಿ ದನಗಳ ಉಪಟಳ, ಎದ್ದು ಕಾಣುತ್ತದೆ. ಬಳ್ಳಾರಿ ನಗರದಲ್ಲಿ ಆಧ್ಯತೆಗನುಗುಣವಾಗಿ, ಯೋಜನಾಬದ್ಧವಾಗಿ ಯಾವ ಕಾಮಗಾರಿಗಳು ನಡೆಯುತ್ತಿಲ್ಲವೆನ್ನುವುದು ಹಾಗೂ ನಿರ್ವಹಣೆ ಎನ್ನುವುದು ಶೂನ್ಯವಾಗಿದೆ ಎನ್ನುವುದು ನಾಗರಿಕರ ಅನಿಸಿಕೆಯಾಗಿದೆ.

ನಗರಕ್ಕೆ ಕುಡಿಯುವ ನೀರಿನ ಯೋಜನೆಗೆ 160 ಕೋಟಿ ರೂಪಾಯಿಗಳನ್ನು ವಿನಿಯೋಗಿಸಿದರೂ ಇಂದಿಗೂ ಕುಡಿಯುವ ನೀರಿನ ನಳಗಳಲ್ಲಿ ಚರಂಡಿ ನೀರು ಮಿಶ್ರಣವಾಗಿ ಬರುತ್ತದೆ ಎಂದು ಜನತೆಯ ದೂರು ಕೇಳಿಬರುತ್ತಿದೆ.

ನಗರಕ್ಕೆ ಅತ್ಯಾವಶ್ಯಕವಾದ ವರ್ತುಲ ರಸ್ತೆ ಇಲ್ಲಿಯವರೆಗೂ ಕಾರ್ಯರೂಪಕ್ಕೆ ಬಂದಿಲ್ಲ. ಟ್ರಾಫಿಕ್ ಸಮಸ್ಯೆ ಪರಿಹರಿಸುವ ನಿಟ್ಟನಲ್ಲಿ ಅವಶ್ಯಕವಾದ ರೈಲ್ವೆ ಮೇಲ್ಸೇತುವೆ ಅಗಲೀಕರಣ, ಬಸ್–ಬೇಗಳು, ಸಾರ್ವಜನಿಕ ಪಾರ್ಕಿಂಗ್ ವ್ಯವಸ್ಥೆ ಮಾಡದೇ, ಸಾರ್ವಜನಿಕರ ಕೋಟ್ಯಾಂತರ ರೂಪಾಯಿ ವಿನಿಯೋಗಿಸಿ, ಅವೈಜ್ಞಾನಿಕವಾದ ಪ್ರತಿಗಳಿಗೆಯಲ್ಲಿ ಟ್ರಾಫಿಕ್‌ಗೆ ಅಡ್ಡಿಯಾಗುವ ರಾಯಲ್ ಸರ್ಕಲ್ ನಿರ್ಮಾಣ ಮಾಡಲಾಗಿದೆ. ಇದಲ್ಲದೇ ಆದ್ಯತೆರಹಿತವಾಗಿ ಕೋಟ್ಯಾಂತರ ರೂಪಾಯಿ ಖರ್ಚು ಮಾಡಿ, ಎಸ್.ಪಿ. ಸರ್ಕಲ್ ನಿರ್ಮಾಣ ಕಾರ್ಯ ಮಾಡಲಾಗುತ್ತಿದೆ.
ಆದ್ದರಿಂದ ನಗರದ ಸಮಸ್ಯೆಗಳ ಪರಿಹರಿಸುವ ನಿಟ್ಟನಲ್ಲಿ ಜನತೆಯ ಬೇಡಿಕೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ಆದ್ಯತೆಯ ಮೇರೆಗೆ ಕಾಮಗಾರಿಗಳನ್ನು ಕೈಗೊಳ್ಳಬೇಕೆಂದು ಆಗ್ರಹಿಸಿದೆ.ಮನವಿ ಸಲ್ಲಿಸಿದ ಸಂದರ್ಭದಲ್ಲಿ ಸಂಚಾಲಕ ಆರ್.ಸೋಮಶೇಖರಗೌಡ, ಮತ್ತಿತರರಿದ್ದರು.

# ಸೇಡಂ ವಿದ್ಯಾರ್ಥಿನಿ ಸಿ.ಸಾಕ್ಷಿರೆಡ್ಡಿ ಶೂಟರ್ ಭಾರತೀಯ ರಾಷ್ಟ್ರೀಯ ತಂಡದ ಟ್ರಯಲ್ಗೆ ಅರ್ಹತೆ




**ಸೇಡಂ,ಡಿ ,16–**ತಾಲೂಕಿನ ಹಯ್ಯಾಳ ಗ್ರಾಮದ ನಿವಾಸಿ ಹಾಗೂ ಸೇಡಂ ನ ವಿದ್ಯಾ ಮಂದಿರ ಸಿ.ಬಿ.ಎಸ್.ಇ ಶಾಲೆಯ ವಿದ್ಯಾರ್ಥಿನಿ ಸಿ.ಸಾಕ್ಷಿರೆಡ್ಡಿ, ಮೂರು ರಾಷ್ಟ್ರೀಯ ಶೂಟಿಂಗ್ ಚಾಂಪಿಯನ್‌ಶಿಪ್‌ಗಳಲ್ಲಿ ಭಾಗವಹಿಸಿದ ನಂತರ ಭಾರತೀಯ ರಾಷ್ಟ್ರೀಯ ಶೂಟಿಂಗ್ ತಂಡದ ಟ್ರಯಲ್ಗೆ ಅರ್ಹತೆ ಪಡೆದಿದ್ದಾರೆ. ಅವರು 2025ರ 68ನೇ ರಾಷ್ಟ್ರೀಯ ಶೂಟಿಂಗ್ ಚಾಂಪಿಯನ್‌ಶಿಪ್ ಸ್ಪರ್ಧೆ (ಪಿಸ್ತೂಲ್ ವಿಭಾಗ)ಯಲ್ಲಿ ಈ ಸಾಧನೆ ಮಾಡಿದ್ದಾರೆ.

ಈ ಸ್ಪರ್ಧೆ ನವದೆಹಲಿ ನಗರದ ಡಾ. ಕರಣಿ ಸಿಂಗ್ ಶೂಟಿಂಗ್ ರೇಂಜ್‌ನಲ್ಲಿ, ಭಾರತೀಯ ರಾಷ್ಟ್ರೀಯ ರೈಫಲ್ ಸಂಘ (ಎನ್.ಆರ್.ಎ.ಐ)ದ ವತಿಯಿಂದ ಆಯೋಜನೆ ಮತ್ತು ನಡೆಸಲಾಯಿತು.ವರ್ಷಗಳ ಶಿಸ್ತುಬದ್ಧ ಅಭ್ಯಾಸ, ನಿರಂತರ ಶ್ರಮ ಹಾಗೂ ರಾಷ್ಟ್ರೀಯ ಮಟ್ಟದ ಸ್ಪರ್ಧೆಗಳ ಅನುಭವದಿಂದಾಗಿ ಸಿ.ಸಾಕ್ಷಿರೆಡ್ಡಿ ಈ ಮಹತ್ವದ ಹಂತವನ್ನು ತಲುಪಿದ್ದಾರೆ. ಈ ಸಾಧನೆ ಸೇಡಂ ತಾಲೂಕಿಗೆ ಹೆಮ್ಮೆಯ ವಿಷಯವಾಗಿದ್ದು, ಯುವ ಕ್ರೀಡಾಪಟುಗಳಿಗೆ ಪ್ರೇರಣೆಯಾಗಿದೆ. ಮುಂದಿನ ಹಂತದಲ್ಲಿ ಅವರು ಭಾರತೀಯ ರಾಷ್ಟ್ರೀಯ ತಂಡದ ಟ್ರಯಲ್ಸ್‌ಲ್ಲಿ ಭಾಗವಹಿಸಿ, ರಾಷ್ಟ್ರೀಯ ತಂಡದಲ್ಲಿ ಸ್ಥಾನ ಪಡೆಯಲು ಸ್ಪರ್ಧಿಸಲಿದ್ದಾರೆ.

# ತುಮಕೂರು ಮತ್ತು ಹಾಸನ ಜಿಲ್ಲಾಧಿಕಾರಿಗಳ ಕಚೇರಿ ಸ್ಫೋಟಿಸುವಾದಗಿ ಬೆದರಿಕೆ ಇ-ಮೇಲ್

**ತುಮಕೂರು,ಡಿ.16–** ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ತವರು ಜಿಲ್ಲೆ ತುಮಕೂರು ಜಿಲ್ಲಾಧಿಕಾರಿಗಳ ಕಚೇರಿಯನ್ನು ಸ್ಫೋಟಿಸುವಾಗಿ ಬೆದರಿಕೆ ಸಂದೇಶ ಬಂದ ಹಿನ್ನೆಲೆಯಲ್ಲಿ ಆತಂಕದ ವಾತಾವರಣ ಸೃಷ್ಟಿಯಾಗಿತ್ತು. ತುಮಕೂರು ಜಿಲ್ಲಾಧಿಕಾರಿಗಳ ಕಚೇರಿಗೆ 9.30 ಕ್ಕೆ ಇ–ಮೇಲ್ ಸಂದೇಶ ರವಾನೆಯಾಗಿದ್ದು, ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಆದೇಶದ ಮೇರೆಗೆ ಎಲ್ಲಾ ಅಧಿಕಾರಿಗಳನ್ನು ಹೊರ ಕಳುಹಿಸಲಾಗಿತ್ತು.

ಬಾಂಬ್ ಬೆದರಿಕೆ ಸಂದೇಶ ಬಂದ ನಂತರ ಎಸ್ ಪಿ ಅಶೋಕ್, ಡಿ ವೈ ಎಸ್ ಪಿ ಚಂದ್ರಶೇಖರ್ ಸೇರಿದಂತೆ ಹಲವು ಪೊಲೀಸ್ ಅಧಿಕಾರಿಗಳು ಜಿಲ್ಲಾಧಿಕಾರಿಗಳ ಕಚೇರಿಯ ನೌಕರರನ್ನು ಕಚೇರಿಯಿಂದ ಹೊರ ಕಳಿಸಿ ಬರುವ ನೌಕರರನ್ನು ಕಚೇರಿಯ ಪ್ರವೇಶದ್ವಾರ ತಡೆಯಲಾಗಿ ಶ್ವಾನದಳ ಸೇರಿದಂತೆ ಬಾಂಬ್ ನಿಶ್ಕ್ರಿಯ ದಳ ಪರಿಶೀಲನೆ ನಡೆಸಿದ್ದು ಆತಂಕದ ವಾತಾವರಣ ಮೂಡಿಸಿತ್ತು.

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡಿ, ಬಾಂಬ್ ಬೆದರಿಕೆ ಸಂದೇಶ ಸಂಬಂಧ ಈಗಾಗಲೇ ಪೊಲೀಸ್ ಇಲಾಖೆ ಎಲ್ಲಾ ಕ್ರಮಗಳನ್ನೂ ಕೈಗೊಂಡು ಕಚೇರಿಯ ಇಂಚಿಂಚೂ ತಪಾಸಣೆ ನಡೆಸಿದ್ದಾರೆ.

ಸಾರ್ವಜನಿಕರು, ಸಿಬ್ಬಂದಿಗಳು, ಅಧಿಕಾರಿಗಳು ಆತಂಕಪಡುವ ಅಗತ್ಯವಿಲ್ಲ. ಪೊಲೀಸರು ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದಾರೆ. ಹಾಸನ, ಮಂಗಳೂರು, ಬೀದರ್ ಸೇರಿದಂತೆ ಐದು ಜಿಲ್ಲೆಗಳಿಗೂ ಬಾಂಬ್ ಬೆದರಿಕೆ ಸಂದೇಶ ಬಂದಿರುವ ಬಗ್ಗೆ ಮಾಹಿತಿ ಇದೆ.

ಇದು ಹುಸಿ ಸಂದೇಶ ಎಂದುಕೊಂಡರೂ ಸಹ ಸಾರ್ವಜನಿಕರ ಸುರಕ್ಷತಾ ದೃಷ್ಟಿಯಿಂದ ಗಂಭೀರವಾಗಿ ಪರಿಗಣಿಸಲಾಗಿದೆ. ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಗಾಗಬಾರದು. ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಂಡಿದ್ದು, ಸಾರ್ವಜನಿಕರ ಸುರಕ್ಷತೆಗೆ ಮೊದಲ ಆದ್ಯತೆ ನೀಡಿದೆ ಎಂದರು.

ಹಾಸನ ಲ್ಲಾಧಿಕಾರಿ ಕಚೇರಿಗೆ ಇ–ಮೇಲ್ ಮೂಲಕ ಬಂದ ಬೆದರಿಕೆ ಸಂದೇಶ–ಹಾಸನನಗರದ ಜಿಲ್ಲಾಧಿಕಾರಿ ಕಚೇರಿಗೆ ಬಾಂಬ್ ಇಟ್ಟಿರುವುದಾಗಿ ಇ–ಮೇಲ್ ಮೂಲಕ ಬಂದ ಬೆದರಿಕೆ ಸಂದೇಶದಿಂದ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಜಿಲ್ಲಾಧಿಕಾರಿ ಲತಾಕುಮಾರಿ ಅವರು ಅಧಿಕಾರಿಗಳೊಂದಿಗೆ ಸಭೆ ನಡೆಸುತ್ತಿದ್ದರು. ಈ ಸಂದರ್ಭದಲ್ಲಿ ಪೊಲೀಸರು ಬಾಂಬ್ ನಿಷ್ಕ್ರಿಯ ದಳದೊಂದಿಗೆ ಕಚೇರಿಗೆ ಆಗಮಿಸಿ ಪರಿಶೀಲಿಸಿದರು. ಡಿಸಿ ಕಚೇರಿ ಆವರಣ ಹಾಗೂ ಒಳಭಾಗದಲ್ಲಿ ಇಂಚಿಂಚೂ ತಪಾಸಣೆ ನಡೆಸಿದರು.

ಡಿವೈಎಸ್‌ಪಿ ಗಂಗಾಧರಪ್ಪ ಅವರ ನೇತೃತ್ವದಲ್ಲಿ ಶ್ವಾನದಳ ಮತ್ತು ಬಾಂಬ್ ನಿಷ್ಕ್ರಿಯ ದಳದ ತಜ್ಞರು ಸ್ಥಳಕ್ಕೆ ಆಗಮಿಸಿ ಸಂಪೂರ್ಣ ತಪಾಸಣೆ ನಡೆಸಿದರು. ಕಚೇರಿ ಕಟ್ಟಡ, ಆವರಣ ಹಾಗೂ ಸುತ್ತಮುತ್ತಲ ಪ್ರದೇಶದಲ್ಲಿ ಸೂಕ್ಷ್ಮವಾಗಿ ಪರಿಶೀಲನೆ ನಡೆಸಿದರೂ ಯಾವುದೇ ಸ್ಫೋಟಕ ವಸ್ತು ಪತ್ತೆಯಾಗಲಿಲ್ಲ.

ಪರಿಶೀಲನೆ ಪೂರ್ಣಗೊಂಡ ಬಳಿಕ ಇದು ಹುಸಿ ಬಾಂಬ್ ಬೆದರಿಕೆ ಮೇಲ್ ಎಂಬುದು ದೃಢಪಟ್ಟಿದ್ದು, ಸಾರ್ವಜನಿಕರು ಹಾಗೂ ಸಿಬ್ಬಂದಿಯಲ್ಲಿ ಉಂಟಾಗಿದ್ದ ಆತಂಕ ನಿವಾರಣೆಯಾಯಿತು. ಮುನ್ನೆಚ್ಚರಿಕಾ ಕ್ರಮವಾಗಿ ಕೆಲಕಾಲ ಕಚೇರಿಯೊಳಗಿನ ಚಟುವಟಿಕೆಗಳನ್ನು ನಿಯಂತ್ರಿಸಲಾಗಿತ್ತು.

ಹುಸಿ ಬೆದರಿಕೆ ಸಂದೇಶ ಕಳುಹಿಸಿದವರ ಪತ್ತೆಗೆ ಪೊಲೀಸರು ತನಿಖೆ ಕೈಗೊಂಡಿದ್ದು, ಇಂತಹ ಕೃತ್ಯಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

ಗಂಭೀರ ತನಿಖೆಗೆ ಡಿಸಿ ಲತಾಕುಮಾರಿ ಆದೇಶ: ಜಿಲ್ಲಾಧಿಕಾರಿ ಕಚೇರಿಗೆ ಬಾಂಬ್ ಬೆದರಿಕೆ ಕರೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಲತಾಕುಮಾರಿ ಮಾತನಾಡಿ, ಜನರು ಯಾವುದೇ ರೀತಿಯ ಗಾಬರಿಗೆ ಒಳಗಾಗಬಾರದು. ಇದು ಒಂದು ಹುಸಿ ಬಾಂಬ್ ಬೆದರಿಕೆಯಾಗಿದೆ ಎಂದು ಸ್ಪಷ್ಟಪಡಿಸಿದರು.

ಡಿ.15ರಂದು ಜಿಲ್ಲಾಧಿಕಾರಿ ಕಚೇರಿಯ ಅಧಿಕೃತ ಡಿಸಿ ಇ–ಮೇಲ್ ವಿಳಾಸಕ್ಕೆ ಆನಾರ್ ಅಶ್ವಿನ್ ಶೇಖರ್ ಎಂಬ ಹೆಸರಿನಲ್ಲಿ ಬಾಂಬ್ ಬೆದರಿಕೆ ಮೇಲ್ ಬಂದಿದೆ. ಈ ಮೇಲ್‌ನಲ್ಲಿ ಪಾಕಿಸ್ತಾನಿ ಐಎಸ್‌ಐ ಸೆಲ್ ಹಾಗೂ ತಮಿಳುನಾಡಿನ ಮಾಜಿ ಎಲ್‌ಟಿಟಿಇ ಸದಸ್ಯರು ಈ ಕೃತ್ಯಕ್ಕೆ ಸಿದ್ಧತೆ ನಡೆಸಿದ್ದಾರೆ ಎನ್ನಲಾಗಿದೆ.

ಮೇಲ್ ಬಂದ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಲಾಗಿದ್ದು, ಹಾಸನ ಎಸಿ ಅವರು ಅಧಿಕೃತವಾಗಿ ದೂರು ದಾಖಲಿಸಿದ್ದಾರೆ. ಈ ಸಂಬಂಧ ಜೆಎಂಎಫ್‌ಸಿ ನ್ಯಾಯಾಧೀಶರಿಗೂ ಮಾಹಿತಿ ನೀಡಲಾಗಿದೆ ಎಂದು ಡಿಸಿ ಲತಾಕುಮಾರಿ ತಿಳಿಸಿದರು.

ಈ ರೀತಿಯ ಬೆದರಿಕೆ ಕರೆಗಳು ಹಾಸನ ಮಾತ್ರವಲ್ಲದೆ ಮಂಗಳೂರು, ಬೀದರ್, ತುಮಕೂರು ಸೇರಿದಂತೆ ರಾಜ್ಯದ ಐದು ಜಿಲ್ಲೆಗಳಿಗೆ ಬಂದಿರುವ ಮಾಹಿತಿ ಇದೆ. ಮೊದಲಿಗೆ



ಇದನ್ನು ಪ್ರಾಂಕ್ ಎಂದುಕೊಂಡರೂ, ಸಾರ್ವಜನಿಕ ಸುರಕ್ಷತೆ ದೃಷ್ಟಿಯಿಂದ ನಿರ್ಲಕ್ಷ್ಯ ಮಾಡದೆ ಗಂಭೀರವಾಗಿ ಪರಿಗಣಿಸಲಾಗಿದೆ.

ಮೇಲ್‌ನಲ್ಲಿ ಐದು ಬಾಂಬ್ ಸ್ಫೋಟಿಸುವುದಾಗಿ ಕನ್ನಡದಲ್ಲಿ ಉಲ್ಲೇಖವಿದ್ದರೂ, ಯಾವ ಸಮಯದಲ್ಲಿ ಅಥವಾ ಯಾವ ಸಂದರ್ಭದಲ್ಲಿ ಸ್ಫೋಟ ನಡೆಯಲಿದೆ ಎಂಬ ಸ್ಪಷ್ಟ ಮಾಹಿತಿ ನೀಡಿಲ್ಲ ಎಂದು ಅವರು ಹೇಳಿದರು.

ಜನರು ಶಾಂತಿಯುತವಾಗಿರಬೇಕು, ಯಾವುದೇ ಆತಂಕಕ್ಕೆ ಒಳಗಾಗಬಾರದು. ಸರ್ಕಾರ ಮತ್ತು ಪೊಲೀಸ್ ಇಲಾಖೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದು, ಸಾರ್ವಜನಿಕ ಸುರಕ್ಷತೆಗೆ ಮೊದಲ ಆದ್ಯತೆ ನೀಡಲಾಗಿದೆ ಎಂದು ಡಿಸಿ ಲತಾಕುಮಾರಿ ಭರವಸೆ ನೀಡಿದ್ದಾರೆ.

ಯುವ ಮಾರ್ಗ

www.yuvamarga.com Yuva Marga yuva_marga_



ಯುವಮಾರ್ಗ ಸುದ್ದಿ

**ಸಿಂಧನೂರು ,ಡಿ.16–** ಸಿಂಧನೂರಿನಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಜನ್ಮದಿನದ ಅಂಗವಾಗಿ ತಾಲೂಕು ಜೆಡಿಎಸ್ ಅಧ್ಯಕ್ಷ ಬಸವರಾಜ ನಾಡಗೌಡ ಅವರ ನೇತೃತ್ವದಲ್ಲಿ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಾಲು, ಹಣ್ಣು, ಬ್ರೆಡ್, ವಿತರಣೆ ಮಾಡಲಾಯಿತು. ಈ ಕಾರ್ಯಕ್ರಮದಲ್ಲಿ ಸಿಂಧನೂರು ತಾಲೂಕಿನ ಜೆಡಿಎಸ್ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು

## ಮಲ್ಲದಗುಡ್ಡ– ಅರೂಢ ಕರಿಬಸವ ತಾತನವರ ಪುಣ್ಯಸ್ಮರಣೆ ಸಾಮೂಹಿಕ ವಿವಾಹ



ಯುವಮಾರ್ಗ ಸುದ್ದಿ

**ಕವಿತಾಳ,ಡಿ.16–** 'ಸಾಮೂಹಿಕ ವಿವಾಹದಿಂದ ಬಡ ಕುಟುಂಬಗಳಿಗೆ ಆರ್ಥಿಕ ಹೊರೆ ಕಡಿಮೆಯಾಗುತ್ತದೆ' ಎಂದು ಮಸ್ಕಿ ಶಾಸಕ ಆರ್.ಬಸನಗೌಡ ತುರವಿಹಾಳ ಹೇಳಿದರು.

ಸಮೀಪದ ಮಲ್ಲದಗುಡ್ಡ ಗ್ರಾಮದ ಆರೂಢ ಅಯ್ಯಪ್ಪ ತಾತನವರರ 44ನೇ ಮತ್ತು ಆರೂಢ ಕರಿಬಸವಸ್ವಾಮೀಜಿಯ 10ನೇ ಪುಣಗಯಸ್ಮರಣೆ ಅಂಗವಾಗಿ ಹಮ್ಮಿಕೊಂಡಿದ್ದ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಅವರು ಮಾತನಾಡಿದರು.

ಪ್ರತಿ ವರ್ಷ ಸಾಮೂಹಿಕ ವಿವಾಹ ಏರ್ಪಡಿಸಿ, ಬಡ ಕುಟುಂಬಗಳಿಗೆ ಅನುಕೂಲ ಕಲ್ಪಿಸುವುದು, ವಿವಿಧ ಕ್ಷೇತ್ರಗಳ ಸಾಧಕರನ್ನು ಗುರುತಿಸಿ, ಪುರಸ್ಕರಿಸುವ ಆರೂಢಮಠದ ಸಂಪ್ರದಾಯ ಘನೀಯ' ಎಂದರು

ಗಲಗ ಮಠದ ಗಂಗಾಧರ ತಾತನವರು, ಯರಮರಸ್‌ನ ಕಲಿಗಣನಾಥ ಸ್ವಾಮೀಜಿ, ಆರೂಢ ಅಯ್ಯಪ್ಪ ತಾತನವರು, ಅಬ್ಬಾಸ್ ಅಲೀ ತಾತನವರು ಗ್ವಾನವಾರ, ಮುಖಂಡ ಮಲ್ಲಿಕಾರ್ಜುಜ ಪಾಟೀಲ್ ಯದ್ದ ದಿನ್ನಿ, ಬಿಜೆಪಿ ಮುಖಂಡ ಪ್ರಸನ್ನ ಪಾಟೀಲ್ತ್ರಿತರರು ಉಪಸ್ಥಿತರಿದ್ದರು.ವಿವಾಹ ಸಮಾರಂಭದಲ್ಲಿ 11 ಜೋಡಿ ನವ ವಧು–ವರರು ದಾಂಪತ್ಯ ಜೀವನಕ್ಕೆ ಕಾಲಿಟ್ಟರು.

ಭಕ್ತರಿಂದ ಆರೂಢ ಅಯ್ಯಪ್ಪ ತಾತನವರ ತುಲಾಭಾರ ನೆರವೇರಿಸಲಾಯಿತು.

## ವಿಶ್ವ ವಿಕಲಚೇತನರ ದಿನಾಚರಣೆ ಪ್ರಯುಕ್ತ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳು



ಯುವಮಾರ್ಗ ಸುದ್ದಿ

**ರಾಯಚೂರು,ಡಿ.16–** ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ವಿಶ್ವ ವಿಕಲಚೇತನರ ದಿನಾಚರಣೆ–2025ರ ಅಂಗವಾಗಿ ವಿಕಲಚೇತನರಿಗಾಗಿ ಕ್ರೀಡಾಕೂಟಗಳು ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಮಾನ್ಯ ಅಪರ ಜಿಲ್ಲಾಧಿಕಾರಿಗಳು ಹಾಗೂ "ವಿಶ್ವ ವಿಕಲಚೇತನರ ದಿನಾಚರಣೆ ಸಮಿತಿ" ಅಧ್ಯಕ್ಷರ ಆದೇಶದಂತೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ದಿನಾಂಕ 18–12–2025 ರಂದು ಬೆಳಿಗ್ಗೆ 10:00 ಗಂಟೆಗೆ ರಾಯಚೂರು ನಗರದ ಜಿಲ್ಲಾ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ವಿವಿಧ ಕ್ರೀಡಾ ಸ್ಪರ್ಧೆಗಳು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಜಿಲ್ಲಾ ವ್ಯಾಪ್ತಿಯ ಎಲ್ಲಾ ವಿಕಲಚೇತನರು ಸದರಿ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನರೇಗಾ ಕೂಲಿ ಕಾರ್ಮಿಕರಿಗಾಗಿ ಉಚಿತ ಆರೋಗ್ಯ ಶಿಬಿರ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.16–** ತಾಲೂಕಿನ ಚಿಕಲಪರ್ವಿ ಗ್ರಾಮದಲ್ಲಿ ತಾಲೂಕು ಪಂಚಾಯಿತಿ ,ಮದ್ಲಾಪುರ್ ಗ್ರಾಮ ಪಂಚಾಯತಿ ಹಾಗೂ ಆರೋಗ್ಯ ಇಲಾಖೆ ಸಹಯೋಗದಲ್ಲಿ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ನರೇಗಾ ಕೂಲಿ ಕಾರ್ಮಿಕರಿಗಾಗಿ ಅಯೋಜಿಸಲಾದ ಉಚಿತ ಆರೋಗ್ಯ ಶಿಬಿರ ಅಭಿಯಾನಕ್ಕೆ ಸಮುದಾಯ ಆರೋಗ್ಯ ಅಧಿಕಾರಿ ಪಾಂಡುರಂಗ ಚಾಲನೆ ನೀಡಿ ಮಾತನಾಡಿ ವಾತಾವರಣದಲ್ಲಿ ಚಳಿ ಹೆಚ್ಚಾಗಿರುವುದರಿಂದ ಕೂಲಿ ಕಾರ್ಮಿಕರು ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿ ವಹಿಸುವುದು ಅಗತ್ಯವಾಗಿದೆ ಪ್ರತಿಯೊಬ್ಬರು ಕೂಡ ಬಿಸಿ ನೀರನ್ನು ಕುಡಿಯಬೇಕು ಜ್ವರ ,ಕೆಮ್ಮು,ಕಫ,ನೆಗಡಿಯಂತಹ ಲಕ್ಷಣಗಳು ಕಂಡು ಬಂದಲ್ಲಿ ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿನ ವೈದ್ಯರಿಂದ ಆರೋಗ್ಯ ತಾಪಸಣೆ ಮಾಡಿಸಿಕೊಂಡು ಅಗತ್ಯ ಚಿಕಿತ್ಸೆಯನ್ನು ಪಡೆಯಬೇಕು ಎಂದು ತಿಳಿಸಿದರು.

ತಾಲೂಕ ಐ.ಇ.ಸಿ. ಸಂಯೋಜಕರಾದ ಈರೇಶ ಮಾತನಾಡಿ ನರೇಗಾ ಯೋಜನೆಯಡಿಯಲ್ಲಿ ಕೂಲಿ ಕಾರ್ಮಿಕರಿಗೆ ದಿನದ ಕೂಲಿದರವನ್ನು ಗಂಡು ಮತ್ತು ಹೆಣ್ಣು ಮಕ್ಕಳಿಗೆ ಸಮಾನವಾಗಿ 370 ರೂಗೆ ಹೆಚ್ಚಿಸಲಾಗಿದೆ. ವಲಸೆ ಯಾಕ್ರಿ ನಿಮ್ಮೂರಲ್ಲೆ ಉದ್ಯೋಗ ಖಾತರಿ ಹಾಗೂ ಸ್ತ್ರೀ ಚೇತನ ಅಭಿಯಾನದಡಿ ಗ್ರಾಮೀಣ ಪ್ರದೇಶದ ಪ್ರತಿ ಅರ್ಹ ಕುಟುಂಬಕ್ಕೂ ಒಂದು ಅರ್ಥಿಕ ವರ್ಷದಲ್ಲಿ 100 ದಿನ ಕೂಲಿ ಕೆಲಸವನ್ನು ಅವರ ಗ್ರಾಮ ವ್ಯಾಪ್ತಿಯಲ್ಲಿಯೇ ನೀಡಲಾಗುವುದು ಒಂದು ಕುಟುಂಬವು ವರ್ಷದಲ್ಲಿ ನೂರು ದಿನ ಕೆಲಸವನ್ನು ಮಾಡುವ ಮೂಲಕ 37 ಸಾವಿರರೂಗಳ ಕೂಲಿಯ ಹಣವನ್ನು ಪಡೆದುಕೊಳ್ಳಬಹುದಾಗಿದೆ ಸಾಮಾಜಿಕ ಭದ್ರತೆ ಕಲ್ಪಿಸಲು ನರೇಗಾ

ಯೋಜನೆಯಡಿಯಲ್ಲಿ 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಹಾಗೂ ವಿಶೇಷ ಚೇತನರಿಗೆ, ಗರ್ಭಿಣಿ ಮಹಿಳೆಯರಿಗೆ ಶೇ 50ರಷ್ಟು ಕೆಲಸ ಮಾಡಿದರೂ ಕೂಡ ಪೂರ್ತಿ ಪ್ರಮಾಣದ ಕೂಲಿಯನ್ನು ನೀಡಲಾಗುವುದು ,ಕೂಲಿ ಕಾರ್ಮಿಕರ 3 ವರ್ಷದೊಳಗಿನ ಮಕ್ಕಳನ್ನು ನೋಡಿಕೊಳ್ಳುವುದಕ್ಕೆ ಶಿಶು ಪಾಲನಾ ಕೇಂದ್ರದ ವ್ಯವಸ್ಥೆಯನ್ನು ಕೂಡ ಮಾಡಲಾಗಿದೆ .ನರೇಗಾ ಕೂಲಿ ಕಾರ್ಮಿಕರು ಎನ್.ಎಂ.ಎಂ.ಎಸ್ ಹಾಜರಾತಿಯನ್ನು ಎರಡು ಬಾರಿ ಕಡ್ಡಾಯವಾಗಿ ನೀಡಬೇಕು ಎಂದು ತಿಳಿಸಿದರು.

ನರೇಗಾ ಕೂಲಿ ಕಾರ್ಮಿಕರಿಗೆ ಆರೋಗ್ಯ ಶಿಬಿರದಲ್ಲಿ ರಕ್ತದೊತ್ತಡ, ಮಧುಮೇಹ , ಕಫ ಪರೀಕ್ಷೆ ಸೇರಿದಂತೆ ಅಗತ್ಯ ವೈದ್ಯಕೀಯ ಪರೀಕ್ಷೆಗಳನ್ನು ಉಚಿತವಾಗಿ ನಡೆಸಲಾಯಿತು ಹಾಗೂ ಮಾತ್ರೆಗಳನ್ನು ವಿತರಿಸಲಾಯಿತು. ಪ್ರಧಾನ ಮಂತ್ರಿ ಭೀಮಾ ಸುರಕ್ಷಾ ಯೋಜನೆ ಮತ್ತು ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಯೋಜನೆ ಬಗ್ಗೆ ಮಾಹಿತಿ ನೀಡಲಾಯಿತು,

ಕಾರ್ಯಕ್ರಮದಲ್ಲಿ ಸಮುದಾಯ ಸುರಕ್ಷಾಧಿಕಾರಿ ಮಂಜುಳಾ, ಆರೋಗ್ಯ ನಿರಕ್ಷಣಾಧಿಕಾರಿ ಚಿದಾನಂದಪ್ಪ ಬಿ.ಎಫ್.ಟಿ. ಮಹಮ್ಮದ್‌ಸಾಬ್ , ಫಾತಿಮಾ ,ಆಶಾ ಕಾರ್ಯಕರ್ತೆಯರು ಹಾಗೂ ಕೂಲಿ ಕಾರ್ಮಿಕರು ಭಾಗವಹಿಸಿದರು.

# ಡಿಸೆಂಬರ್ ಮಾಹೆಗೆ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ನಿತೀಶ್ ಕೆ.

ಯುವಮಾರ್ಗ ಸುದ್ದಿ



**ರಾಯಚೂರು,ಡಿ.16–** ಇಲಿನ ಜಿಲ್ಲಾ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2025ರ ಡಿಸೆಂಬರ್ ಮಾಹೆಗೆ ಪಡಿತರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ(ಎಎವೈ) ಪಡಿತರ ಚೀಟಿಗೆ 35 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಸಾರವರ್ಧಿತ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ & ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಸೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ಒಕ್ಕೂಟಗಳ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ.

ಯುವಮಾರ್ಗ ಸುದ್ದಿ

**ಮಾನ್ವಿ,ಡಿ.16–** ತಾಲೂಕಿನ ನೀರಮಾನ್ವಿ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ. ಸಿ. ಟ್ರಸ್ಟ್ ವತಿಯಿಂದ ನಡೆದ ನೀರಮಾನ್ವಿ ಮತ್ತು ಮಾಡಗಿರಿ ವಲಯದ ಒಕ್ಕೂಟಗಳ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ತಾಲೂಕ ಯೋಜನಾಧಿಕಾರಿ ಸುನಿತಾ ಪ್ರಭು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಮಹಿಳೆಯರು ಸಂಘದ ಮೂಲಕ ಉಳಿತಾಯವನ್ನು ಮಾಡಿ ಅಗತ್ಯವಾದ ಆರ್ಥಿಕ ನೆರವಿನ ಜೋತೆಗೆ ಸಂಘದ ಗುಣಮಟ್ಟವನ್ನು ಕಾಯ್ದುಕೊಂಡು ಲಾಭಂಶವನ್ನು ಹೊಂದುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳುವುದರಿಂದ ಸ್ವಾವಲಂಬಿ ಜೀವನವನ್ನು ನಡೆಸುವುದಕ್ಕೆ ಸಾಧ್ಯ ಮಹಿಳೆಯರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣದ ಜೋತೆಗೆ ಸಂಸ್ಕಾರವನ್ನು ,ನಮ್ಮ ಸಂಸ್ಕೃತಿಯನ್ನು, ಪರಿಚಯಿಸಿದಾಗ ಮಾತ್ರ ಉತ್ತಮ ಪ್ರಜೆಗಳಾಗುವುದಕ್ಕೆ ಸಾಧ್ಯ ಎಂದು ತಿಳಿಸಿದರು.

ಅತಿ ಹೆಚ್ಚು ಲಾಭಾಂಶ ಹೊಂದಿದ ಎರಡು ಸಂಘಗಳಿಗೆ ಪ್ರಮಾಣ



ಪತ್ರವನ್ನು ವಿತರಿಸಲಾಯಿತು

ವಿಮಾ ಯೋಜನೆಗಳ ಬಗ್ಗೆ ರಾಯಚೂರು ಎನ್,ಆರ್. ಎಲ್.ಎಂ. ಅಧಿಕಾರಿ ನಿಂಗಪ್ಪ ಮಾಹಿತಿ ನೀಡಿದರು .ಟಿ.ಎನ್.ಓ. ತಿಮಪ್ಪ ಸಿ.ಎಸ್.ಸಿ .ಕೇಂದ್ರ ಗಳ ಬಗ್ಗೆ ಮಾಹಿತಿ ನೀಡಿದರು ನಿರಮಾನ್ವಿ ಒಕ್ಕೂಟದ ಅಧ್ಯಕ್ಷರಾದ ಯಲ್ಲಪ್ಪ, ಮಾಡಗಿರಿ ಒಕ್ಕೂಟದ ಅಧ್ಯಕ್ಷರಾದ ಸಂಗೀತ, ನಿವೃತ್ತ ಪೊಲೀಸ್ ನಿರೀಕ್ಷಕರಾದ ವೀರನಗೌಡ, ಸೇರಿದಂತೆ ವಲಯದ ಮೇಲ್ವಿಚಾರಕರು, ಸೇವಾ ಪ್ರತಿನಿಧಿಗಳು, ವಿ.ಎಲ್.ಇ. ಗಳು ಸಂಘದ ನೂರಾರು ಮಹಿಳಾ ಸದಸ್ಯರು ಭಾಗವಹಿಸಿದರು.

## ದರಪಟ್ಟಿಗೆ ಅರ್ಜಿ ಆಹ್ವಾನ

**ರಾಯಚೂರು,ಡಿ.16–** ರಾಷ್ಟ್ರೀಯ ಆರೋಗ್ಯ ಅಭಿಯಾನ ಕಾರ್ಯಕ್ರಮದ ಅಡಿಯಲ್ಲಿ 2025–26ನೇ ಸಾಲಿನಲ್ಲಿ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಸಂಘದ ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗದಿಂದ ಜಿಲ್ಲೆಯ ಮಾನಸಿಕ ರೋಗಿಗಳಿಗೆ ಮಾತ್ರೆ ಮತ್ತು ಔಷಧಿಗಳನ್ನು ಖರೀದಿಸಲು ಅರ್ಹ ಸರಬರಾಜುದಾರರು ತಮ್ಮ ಏಜೆನ್ಸಿಯ ಜಿ.ಎಸ್.ಟಿ ಕೊಟೇಶನ್‌ಗಳ ಮುಖಾಂತರ ದರಪಟ್ಟಿಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಏಜೆನ್ಸಿಗಳು ಡಿಸೆಂಬರ್ 23ರೊಳಗಾಗಿ ಜಿ.ಎಸ್.ಟಿ ಕೊಟೇಶನ್‌ಗಳನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಲಯದ ರಾಯಚೂರು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಲಯ ವಿಭಾಗ ರಾಯಚೂರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8151896578ಗೆ ಸಂಪರ್ಕಿಸುವಂತೆ ಅಥವಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಲಯ ವಿಭಾಗದ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿಸೆಂಬರ್ 18ರಂದು ವಿಕಲಚೇತನರಿಗೆ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆ ಆಯೋಜನ

**ರಾಯಚೂರು,ಡಿ.16–** ಇಲ್ಲಿನ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ ವಿಶ್ವ ವಿಕಲಚೇತನರ ದಿನಾಚರಣೆ–2025ರ ಅಂಗವಾಗಿ ಡಿಸೆಂಬರ್ 18ರ ಬೆಳಿಗ್ಗೆ 10ಗಂಟೆಗೆ ನಗರದ ಜಿಲ್ಲಾ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಕ್ರೀಡಾಕೂಟಗಳು ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾ ವ್ಯಾಪ್ತಿಯ ಎಲ್ಲಾ ವಿಕಲಚೇತನರು ಈ ಕ್ರೀಡೆಗಳಲ್ಲಿ ಭಾಗವಹಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಾದ ಶ್ರೀದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉದಯಕಾಲ ನ್ಯೂಸ್ 2026ರ ಕ್ಯಾಲೆಂಡರ್ ಬಿಡುಗಡೆ



ಯುವಮಾರ್ಗ ಸುದ್ದಿ

**ಕವಿತಾಳ,ಡಿ.16–**ಪಟ್ಟಣದ ಸ್ವಾಮಿ ವಿವೇಕಾನಂದ ಪತ್ತಿನ ಸಹಕಾರಿ ಸಂಘದ ವತಿಯಿಂದ 2026ನೇ ಸಾಲಿನ ನೂತನ ಕ್ಯಾಲೆಂಡರನ್ನು ಹೊರತಂದಿದ್ದು ಸಂಘದ ಅಧ್ಯಕ್ಷ ರಜೇಶ್ ಬನ್ನಿಗಿಡದ್ ಅವರು ಬಿಡುಗಡೆ ಮಾಡಿದರು.

ನಿರ್ದೇಶಕ ಬಸವರಾಜ್ ಕಂದಗಲ್, ಜಯರಾಂ ಉಡುಪಿ,ಚನ್ನಪ್ಪ ಮತ್ತು ಸಂಘದ ಸಿಇಒ ಲಕ್ಷ್ಮೀಪತಿ ಬಾಗೋಡಿ ಉಪಸ್ಥಿತರಿದ್ದರು.

## ಖಣದಾಳ ಗ್ರಾಮ ಪಂಚಾಯತಗೆ 2 ಕೋಟಿ ಅನುದಾನ



**ಕಲಬುರಗಿ,ಡಿ.16–** ತಾಲೂಕಿನ ಖಣದಾಳ ಗ್ರಾಮ ಪಂಚಾಯತಿಗೆ ಕಳೆದ ನಾಲ್ಕು ವರ್ಷಗಳಲ್ಲಿ 2.06 ಕೋಟಿ ರೂ.ಗಳ ಅನುದಾನವನ್ನು ನೀಡಲಾಗಿದೆ ಎಂದು ಪಂಚಾಯತ್ ರಾಜ್ ಗ್ರಾಮೀಣಾಭಿವೃದ್ಧಿ ಸಚಿವರಾದ ಪ್ರೀಯಾಂಕ್ ಖರ್ಗೆ ಅವರು ಹೇಳಿದರು.

ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ವಿಧಾನ ಮಂಡಲ ಅಧಿವೇಶನದಲ್ಲಿ ವಿಧಾನ ಪರಿಷತ ಸದಸ್ಯ ಡಾ.ಬಿ.ಜಿ.ಪಾಟೀಲ ಅವರ ಪ್ರಶ್ನೆಗೆ ಸಚಿವರು ಉತ್ತರಿಸಿದ್ದಾರೆ.

ಕಳೆದ 2021–22ರ ಅವಧಿಯಲ್ಲಿ 69.87 ಲಕ್ಷ, 2022–23ರಲ್ಲಿ 44.33 ಲಕ್ಷ, 2023–24ರಲ್ಲಿ 45.92 ಲಕ್ಷ ಹಾಗೂ 2024–25ರಲ್ಲಿ 46.2 ಲಕ್ಷ ಒಟ್ಟು ಈ ನಾಲ್ಕು ವರ್ಷಗಳಲ್ಲಿ 2.06 ಕೋಟಿ ರೂ.ಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಕೇಂದ್ರದ 15ನೇ ಹಣಕಾಸು ಅಯೋಗದ ಅನುದಾನವನ್ನು ಮಾರ್ಗಸೂಚಿಯಂತೆ ಗ್ರಾಮ ಪಂಚಾಯತ ಗಳಿಗೆ ಶೇ.90 ಜನಸಂಖ್ಯೆ ಮತ್ತು ಶೇ.10 ಭೌಗೋಳಿಕ ವಿಸ್ತಿರ್ಣ ಆಧರಿಸಿ ಹಂಚಿಕೆ ಮಾಡಲಾಗುತ್ತಿದೆ. ಶೇ.40 ಅನುದಾನ ಅನಿರ್ಭಧಿವಾಗಿದ್ದು, ಇದನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ ರಾಜ್ ಅಧಿನಿಯಮದಡಿ ವಹಿಸಿರುವ ಪ್ರಕಾರ್ಯಗಳಾದ ಕೃಷಿ, ತೋಟಗಾರಿಕೆ, ರೇಷ್ಮೆ ಬೆಳೆ ಉತ್ಪಾದನೆ ಹೆಚ್ಚಿಸಲು, ಬಡತನ ನಿರ್ಮೂಲನೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಸಂಬಂಧಿಸಿದಂತೆ ಮೂಲ ಸೌಕರ್ಯ ಅಭಿವೃದ್ಧಿ ಗ್ರಂಥಾಲಯ ನಿರ್ವಹಣೆ ಆರೋಗ್ಯ ಕೇಂದ್ರಗಳ ಮೂಲ ಸೌಕರ್ಯ ಮಹಿಳೆಯರು ಮತ್ತು ಮಕ್ಕಳು ವಿಕಲಾಂಗರು, ಹಿರಿಯ ನಾಯರಿಕರು ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಶೇ.50 ರಷ್ಟು ಕಡ್ಡಾಯವಾಗಿ ಕುಡಿಯುವ ನೀರು ಮತ್ತು ನೈರ್ಮಲ್ಯ ನಿರ್ವಹಣೆಗೆ ಅನುದಾನವನ್ನು ಬಳಸಲಾಗುತ್ತದೆ ಎಂದು ಸಚಿವರು ವಿವರಿಸಿದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H